ವಿಜಯಪುರ | ಸಂಪುಟ 01 | ಸಂಚಿಕೆ 251 | ಪುಟ 4 | ₹ 3.00

https://udayarashminews.com

udayarashmi 7026028778

# ಉದಯ ರಶ್ಮಿ

ಜನಪರ-ಜೀವಪರ

ಸಂಪಾದಕ : ಇಂದುಶೇಖರ ಮಣೂರ

ಕನ್ನಡ ದಿನಪತ್ರಿಕೆ

editor.udayarashmi@gmail.com | Title Code: KARKAN28047 | ಬುಧವಾರ, ನವೆಂಬರ್ 29, 2023



"ಅನಧಿಕೃತವಾಗಿ ಮಕ್ಕಳನ್ನು ದತ್ತು ಪಡೆದುಕೊಳ್ಳುವುದು ಕಾನೂನು ಬಾಹಿರವಾಗಿದೆ. ಕಾನೂನು ಬದ್ಧವಾಗಿ ಅಗತ್ಯ ದಾಖಲಾತಿಗಳೊಂದಿಗೆ ದತ್ತು ಸ್ವೀಕಾರ ಕೇಂದ್ರ ಸಂಪರ್ಕಿಸಿ ದತ್ತು ಪಡೆದುಕೊಳ್ಳಬೇಕು. ಮಕ್ಕಳ ಹಕ್ಕುಗಳ ರಕ್ಷಣೆಯಾಗುವಂತೆ ನೋಡಿಕೊಳ್ಳಬೇಕು.

– ಶಂಕರ ಮಾರಿಹಾಳ
ಹೆಚ್ಚುವರಿ ಪೋಲಿಸ್ ವರಿಷ್ಠಾಧಿಕಾರಿ, ವಿಜಯಪುರ

### ಡಿಕೆ ಶಿವಕುಮಾರ್ ವಿರುದ್ದ ಸಿಬಿಐ ತನಿಖೆ ವಾಪಸ್ । ನ್ಯಾಯಾಂಗದ ಕಾರ್ಯನಿರ್ವಹಣೆಯಲ್ಲಿ ಹಸ್ತಕ್ಷೇಪದ ಯತ್ನ

# ಸರ್ಕಾರದ ನಡೆ ಪ್ರಶ್ನಿಸಿ ಹೈಕೋರ್ಟ್ ಮೆಟ್ಟಿಲೇರಿದ ಶಾಸಕ ಯತ್ನಾಳ

ಬೆಂಗಳೂರು: ಡಿಸಿಎಂ ಡಿಕೆ ಶಿವಕುಮಾರ್ ವಿರುದ್ಧದ ಸಿಬಿಐ ತನಿಖೆ ಅನುಮತಿ ವಾಪಸ್ ಪಡೆಯಲು ಮುಂದಾಗಿರುವ ರಾಜ್ಯ ಸರ್ಕಾರ ಸರ್ಕಾರದ ಕ್ರಮವನ್ನು ಪ್ರಶ್ನಿಸಿ ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಹೈಕೋರ್ಟ್ ಮೆಟ್ಟಿಲೇರಿದ್ದಾರೆ.

ಸರ್ಕಾರದ ನಡೆಯನ್ನು ಪ್ರಶ್ನಿಸಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಹೈಕೋರ್ಟ್‌ಗೆ ಮಧ್ಯಂತರ ಅರ್ಜಿ ಸಲ್ಲಿಸಿದ್ದಾರೆ. ಹೈಕೋರ್ಟ್ ವಿಚಾರಣೆಯನ್ನು ನಿಷ್ಪಲಗೊಳಿಸಲು ಯತ್ನಿಸಲಾಗುತ್ತಿದೆ. ಸಿಬಿಐ ತನಿಖೆ ಬಹುತೇಕ ಮುಕ್ತಾಯದ ಹಂತದಲ್ಲಿದೆ. ಈ ಹಂತದಲ್ಲಿ ಸರ್ಕಾರದ ಕ್ರಮ ಕಾನೂನುಬಾಹಿರವಾಗಿದೆ. ಸಿಬಿಐ ತನಿಖೆಯನ್ನು ಮೊಟಕುಗೊಳಿಸುವ ಉದ್ದೇಶ ಹೊಂದಿದ್ದು, ಈ ಮೂಲಕ ನ್ಯಾಯಾಂಗದ ಕಾರ್ಯನಿರ್ವಹಣೆಯಲ್ಲಿ ಹಸ್ತಕ್ಷೇಪದ ಯತ್ನ ನಡೆದಿದೆ. ಹೀಗಾಗಿ ಸರ್ಕಾರದ ಕ್ರಮಕ್ಕೆ ಸೀಮಿತವಾಗಿ ತಮ್ಮ ವಾದ ಆಲಿಸಲು ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಮನವಿ ಮಾಡಿದ್ದಾರೆ.

### ನಿರ್ಧಾರ ಕಾನೂನಿಗೆ ವಿರುದ್ಧ :ಸಿಎಂ

ಅಕ್ರಮ ಆಸ್ತಿ ಗಳಿಕೆ ಪ್ರಕರಣವನ್ನು ಸಿಬಿಐಗೆ ಹಸ್ತಾಂತರಿಸುವ ನಿರ್ಧಾರ ಕಾನೂನಿಗೆ ವಿರುದ್ಧವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿಕೆ ನೀಡಿದ್ದು, ಅಂದಿನ ಬಿಜೆಪಿ ಸರ್ಕಾರ ಸ್ಪೀಕರ್‌ನಿಂದ ಒಪ್ಪಿಗೆ ಪಡೆಯುವ ಬಗ್ಗೆ ತಲೆಕೆಡಿಸಿಕೊಂಡಿರಲಿಲ್ಲ ಎಂದಿದ್ದಾರೆ. ಆದರೆ, ಮಾಜಿ ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ ಅವರು ಟೀಕೆಗೆ ತಿರುಗೇಟು ನೀಡಿದ್ದು, ಆ ಸಮಯದಲ್ಲಿ ಅವರ ಒಪ್ಪಿಗೆ ಅಗತ್ಯವಿಲ್ಲ ಎಂದು ಸಮರ್ಥಿಸಿಕೊಂಡಿದ್ದಾರೆ.



### ಸಿಬಿಐ ತನಿಖೆ ಅನುಮತಿ ವಾಪಸ್ ನಿರ್ಧಾರ

ಬೆಂಗಳೂರು: ಆದಾಯಮೀರಿ ಆಸ್ತಿ ಗಳಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ಡಿಕೆ ಶಿವಕುಮಾರ್ ವಿರುದ್ದ ತನಿಖೆಗೆ ನಡೆಸಲು ಹಿಂದಿನ ಬಿಜೆಪಿ ಸರ್ಕಾರ ಸಿಬಿಐಗೆ ಅನುಮತಿ ನೀಡಿತ್ತು. ಆದರೆ ಇದೀಗ ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ವಿದ್ದು ಡಿಸಿಎಂ ಡಿಕೆ ಶಿವಕುಮಾರ್ ವಿರುದ್ಧದ ಪ್ರಕರಣ ಸಂಬಂಧ ಸಿಬಿಐ ತನಿಖೆಗೆ ನೀಡಿದ್ದ ಅನುಮತಿ ವಾಪಸ್ ಪಡೆಯಲು ನಿರ್ಧರಿಸಿದೆ.

ಕಾಂಗ್ರೆಸ್ ಹಿರಿಯ ನಾಯಕ ಹಾಗೂ ಪ್ರಸ್ತುತ ಕರ್ನಾಟಕ ಡಿಸಿಎಂ ಆಗಿರುವ ಡಿಕೆ ಶಿವಕುಮಾರ್ ವಿರುದ್ಧದ ಅಕ್ರಮ ಆಸ್ತಿ ಗಳಿಕೆ ಪ್ರಕರಣವನ್ನು ತನಿಖೆಗೆ ನಡೆಸಲು ಹಿಂದಿನ ಬಿಜೆಪಿ ಸರ್ಕಾರ ಸಿಬಿಐಗೆ ಅನುಮತಿ ನೀಡಿತ್ತು. ಆದರೆ ಇದೀಗ ರಾಜ್ಯದಲ್ಲಿ ಆಡಳಿತಾರೂಢ ಕಾಂಗ್ರೆಸ್ ಸರ್ಕಾರ ಡಿಕೆ ಶಿವಕುಮಾರ್ ವಿರುದ್ಧದ ಪ್ರಕರಣವನ್ನು ಸಿಬಿಐ ತನಿಖೆಯಿಂದ ವಾಪಸ್ ಪಡೆಯಲು ನಿರ್ಧರಿಸಿದೆ ನ.23ರಂದು ರಾಜ್ಯ ಸಚಿವ ಸಂಪುಟದಲ್ಲಿ ಈ ಕುರಿತು ನಿರ್ಣಯ ಕೈಗೊಳ್ಳಲಾಗಿತ್ತು..

### ರಾಜ ನುಡಿ

ಹಾರವಾಗುವ ಹೂವನ್ನು ಅರಳಿಸಲು ಮುಳ್ಳನ್ನು ಬೇಲಿಯಾಗಿಸಿಕೊಳ್ಳಬಹುದು. ವ್ಯಕ್ತಿ, ವಸ್ತು ಅಥ-ವಾ ಅವಕಾಶಗಳಲ್ಲಿನ ತಾಕತ್ತನ್ನು ಸಕಾರಾತ್ಮಕವಾಗಿ ವಿನಿಯೋಗಿಸಿಕೊಳ್ಳುವ ಜಾಣ್ಮೆ ಇದ್ದವನಿಗೆ ಇಲ್ಲಿ ಯಾವುದು ಯಃಕಶ್ಚಿತವೆನಿಸುವುದಿಲ್ಲ.

–ಡಾ. ರಾಜಶೇಖರ ನಾಗೂರ

### ತೆಲಂಗಾಣದಲ್ಲಿ ಗ್ಯಾರಂಟಿ ಯೋಜನೆಗಳ ಸದ್ದು । ಚುನಾವಣೆ ಆಯೋಗದ ಎಚ್ಚರಿಕೆ

# ತೆಲುಗು ಪತ್ರಿಕೆಗಳಲ್ಲಿ ಕರ್ನಾಟಕ ಜಾಹೀರಾತಿಗೆ ತಡೆ

ಹೈದರಾಬಾದ: ತೆಲಂಗಾಣದಲ್ಲಿ ಗ್ಯಾರಂಟಿ ಯೋಜನೆಗಳ ಹವಾ ಎಬ್ಬಿಸಿರುವ ಕಾಂಗ್ರೆಸ್ ಪಕ್ಷಕ್ಕೆ ಹಿನ್ನಡೆ ಆಗಿದೆ. ಕರ್ನಾಟಕ ರಾಜ್ಯದ ಮಾದ-ರಿಯಲ್ಲಿ ತೆಲಂಗಾಣದಲ್ಲಿ ಗ್ಯಾರಂಟಿ ಯೋಜನೆ ಜಾರಿ ಮಾಡುವುದಾಗಿ ಆರು ಗ್ಯಾರಂಟಿಗಳನ್ನು ಕಾಂಗ್ರೆಸ್ ಘೋಷಿಸಿದೆ. ಇದಕ್ಕೆ ಸಂಬಂಧಿಸಿದಂತೆ ತೆಲುಗಿನ ಸಾಕ್ಷಿ, ಆಂಧ್ರಜ್ಯೋತಿ, ಈ ನಾಡು ಪತ್ರಿಕೆಗಳಲ್ಲಿ ಮೊದಲ ಪೇಜಿನಲ್ಲಿ ದೊಡ್ಡ ಜಾಹೀರಾತುಗಳನ್ನು ನೀಡಿತ್ತು. ಕರ್ನಾಟಕದ ಹಣ ತೆಲಂಗಾಣದಲ್ಲಿ ಇದಕ್ಕೆ ಬಿಜೆಪಿ ನಾಯಕರು ಆಕ್ರೋಶ ವ್ಯಕ್ತಪಡಿಸಿದ್ದರು. ಕರ್ನಾಟಕವನ್ನು ಆರ್ಥಿಕವಾಗಿ ದಿವಾಳಿ ಮಾಡಲಾಗಿದೆ ಎಂದು ಆರೋಪಿಸಿದ್ದರು. ಜೊತೆಗೆ ಬಿಜೆಪಿ ಚುನಾವಣೆ ಆಯೋಗಕ್ಕೆ ದೂರು ನೀಡಿತ್ತು.

ಇದೀಗ ಚುನಾವಣೆ ಆಯೋಗವು ಕಾಂಗ್ರೆಸ್ ತೆಲಂಗಾಣದ ದಿನಪತ್ರಿಕೆಗಳಲ್ಲಿ ಜಾಹೀರಾತು ನೀಡದಂತೆ ಕರ್ನಾಟಕ ಕಾಂಗ್ರೆಸ್‌ಗೆ ತಾಕೀತು ಮಾಡಿದೆ. ಸದ್ಯ ಸೋಮವಾರ ಇಡೀ ದಿನ ಕರ್ನಾಟಕ ಸರ್ಕಾರದ ಜಾಹೀರಾತಿನದ್ದೆ ಸುದ್ದಿ ಆಗಿತ್ತು. ಜಾಹೀರಾತು ನೀಡಿ ನಾವು ಕರ್ನಾಟಕದಲ್ಲಿ ಗ್ಯಾರಂಟಿ ಯೋಜನೆಗಳನ್ನು ಸಾಕಾರಗೊಳಿಸಿದ್ದೇವೆ. ಆರೇ ತಿಂಗಳಲ್ಲಿ ನೀಡಿದ ಭರವಸೆ ಪೂರೈಸಿದ್ದೇವೆ ಎಂದು ಚುನಾವಣೆ ಗೆಲ್ಲುವ ತಂತ್ರ ಹೂಡಿದೆ.




ಹೇಳಿದ್ದ ಕಾಂಗ್ರೆಸ್, ಅದಕ್ಕೆ ಸಂಬಂಧಿಸಿಂತೆ ತೆಲುಗು ಪತ್ರಿಕೆಗಳಲ್ಲಿ ಜಾಹೀರಾತುಗಳನ್ನು ನೀಡಿತ್ತು. ಇದಕ್ಕೆ ಚುನಾವಣೆ ಆಯೋಗ ತಡೆ ನೀಡಿದ್ದಲ್ಲದೇ ಕಾಂಗ್ರೆಸ್ ಗೆ ಎಚ್ಚರಿಕೆ ಸಹ ನೀಡಿದೆ.

ಕರ್ನಾಟಕದಂತೆ ತೆಲಂಗಾಣ ವಿಧಾನಸಭಾ ಚುನಾವಣೆಗೂ ಮುನ್ನ ಪೋಲಾಗುತ್ತಿದೆ ಎಂದು ಕಾಂಗ್ರೆಸ್ ನಡೆಯನ್ನು ಬಿಜೆಪಿ ವಿರೋಧಿಸಿತ್ತು.

ಕರ್ನಾಟಕ ರಾಜ್ಯದ ಸಚಿವರನ್ನು ತೆಲಂಗಾಣದಲ್ಲಿ ಚುನಾವಣೆಗಾಗಿ ನಿಯೋಜಿಸಿರುವ ಪಕ್ಷ ಮತ್ತು ಸಿಎಂ ಸಿದ್ದರಾಮಯ್ಯ ಅವರು, ಇದೀಗ ಇಲ್ಲಿನ ಜನರ ತೆರಿಗೆ ಹಣದಲ್ಲಿ ತೆಲುಗು ರಾಜ್ಯದಲ್ಲಿ ಜಾಹೀರಾತು ನೀಡಿವೆ.

# ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಡಿಎಸ್ಸೆಸ್ ಪ್ರತಿಭಟನೆ

**ಉದಯರಶ್ಮಿ ನ್ಯೂಸ್**

ಮೋರಟಗಿ: ಸುಪ್ರಸಿದ್ಧ ಘತ್ತರಗಿ ಗ್ರಾಮಕ್ಕೆ ಅಮಾವಾಸ್ಯೆ ಹುಣ್ಣಿಮೆ ಹಾಗೂ ಪ್ರತಿ ಶುಕ್ರವಾರ ಸಹಸ್ರಾರು ಭಕ್ತಾದಿಗಳು ಹಾಗೂ ವ್ಯಾಪಾರ ವಹಿವಾಟು ಮಾಡುವ ಸಾರ್ವಜನಿಕರು ಸಂಚರಿಸುತ್ತಿದ್ದು, ಈ ಮಾರ್ಗದಲ್ಲಿ ಟ್ರಾಕ್ಟರ್ ಚಾಲಕರು ದ್ವಿಚಕ್ರ ಸವಾರರು ಹಾರ್ನ ಹಾಕಿದರೂ ಕೇಳದ ನಿಟ್ಟಿನಲ್ಲಿ ಮನಬಂದಂತೆ ಟೇಪಿನ ಸೌಂಡ್ ಹೆಚ್ಚಿಸಿ ಸುಮಾರು ವರ್ಷಗಳಿಂದ ಚಾಲನೆ ಮಾಡುತ್ತ ಬರುತಿದ್ದು ಇದ-ರಿಂದ ಆಗಾಗ ಅಪಘಾತ ಆಗುತ್ತಲೇ ಬಂದಿವೆ. ಕೂಡಲೇ ಅಧಿಕಾರಿಗಳು ಸಕ್ಕರೆ ಕಾರ್ಖಾನೆಯ ಅಧಿಕಾ-ರಿಗಳಿಗೆ ಸೂಚಿಸಿ ಶಬ್ದ ಮಾಲಿನ್ಯಕ್ಕೆ ಬ್ರೇಕ್ ಹಾಕಿ ಸಾರ್ವಜನಿಕರ ಜೀವ ಉಳಿಸುವ ಕಾರ್ಯ ಮಾಡಬೇಕು ಎಂದು ಜಿಲ್ಲಾ ದಸಸ ಸಂಚಾಲಕ ಧರ್ಮರಾಜ ಯಂಟಮಾನ ಆಕ್ರೋಶ ವ್ಯಕ್ತಪಡಿಸಿದರು.

ಮಂಗಳವಾರ ಕಲಬುರ್ಗಿ ಜಿಲ್ಲೆಯ ಅಫ್ಜಲ್ಪುರ್ ತಾಲೂಕಿನ ಹಾವಳಗಾ ಶ್ರೀ ರೇಣುಕಾ ಶುಗರ್ ಖಾರ್ಖಾನೆ ಹಾಗೂ ಆಲಮೇಲ್ ತಾಲೂಕಿನ ಮನಾಲಿ ಶುಗರ್ ಖಾರ್ಖಾನೆ ಗೆ ಕಬ್ಬು ಸಾಗಿಸುವ ವಾಹನಗಳಿಂದ ಆಗುತ್ತಿರುವ ಅಪಘಾತ ಖಂಡಿಸಿ ಮತ್ತು ಶಬ್ದ ಮಾಲಿನ್ಯ ತಡೆಗಟ್ಟಲು ಹಾಗೂ ರೈತರ ಹಲವಾರು ಬೇಡಿಕೆಗಳ ಕುರಿತು ಅಗ್ರಹಿಸಿ ದಲಿತ ಸಂಘರ್ಷ ಸಮೀತಿ ಹಾಗೂ ವಿವಿಧ ಜನಪರ ಸಂಘಟನೆಗಳು ಜಂಟಿಯಾಗಿ ಬಗಲೂರ ಗ್ರಾಮದ ಡಾ, ಅಂಬೇಡ್ಕರ್ ವೃತ್ತದಲ್ಲಿ ಹಮ್ಮಿಕೊಂಡ ಪ್ರತಿಭಟನೆಯಲ್ಲಿ ನೇತೃತ್ವ ವಹಿಸಿ ತಹಸೀಲ್ದಾರ್ ಮೂಲಕ ಘನ ರಾಜ್ಯಪಾಲರಿಗೆ ಮನವಿ ಸಲ್ಲಿಸಿ ಅವರು ಮಾತನಾಡಿದರು.





ಟ್ರಾಕ್ಟರ್ ಗಳ ಹಿಂದುಗಡೆ ರೇಡಿಯಂ ನಾಮ ಫಲಕ ಹಾಕದೆ ಇರುವುದರಿಂದ ರಾತ್ರಿ ವೇಳೆ ವಾಹನ ಸವಾರರು ತೀವ್ರ ತೊಂದರೆಯನ್ನು ಅನುಭವಿಸುತ್ತಿದ್ದಾರೆ. ಇದ-ರಿಂದ ಅದೆಷ್ಟೋ ಅಮಾಯಕರು ಅಪಘಾತದಲ್ಲಿ ಸಾವನ್ನಪ್ಪಿ ಕುಟುಂಬಸ್ಥರು ಸಾಕಷ್ಟು ನೋವುಗಳನ್ನು ಅನುಭವಿಸುತ್ತಿದ್ದಾರೆ. ಕಳೆದ ವಾರ ರಾತ್ರಿ ವೇಳೆಯಲ್ಲಿ ಪಂಚೆರ್ ಆಗಿ ನಿಂತಿರುವ ಟ್ರಾಕ್ಟರ್ ಎರಡು ಬೈಕ್ ಸವಾರರ ಅಪಘಾತವಾಗಿ ಸ್ಥಳದಲ್ಲೇ ಒಬ್ಬ ಸವಾರ ಮೃತಪಟ್ಟು, ಇನ್ನೋರ್ವ ಆಸ್ಪತ್ರೆಯಲ್ಲಿ ಸಾವು ನೋವಿನ ಮದ್ಯದಲ್ಲಿ ಹೋರಾಡುತ್ತ ಚಿಕಿತ್ಸೆ ಪಡೆಯುತ್ತಿದ್ದಾನೆ. ಕಾರಣ ಕೂಡಲೇ ಟ್ರಾಕ್ಟರ್ ವಾಹನಗಳಲ್ಲಿ ಟೇಪ್ ರಿಕಾರ್ಡರ್ ಸೌಂಡ್ ಬ್ಯಾನ್ ಮಾಡಬೇಕು ಎಂದು ಆಗ್ರಹಿಸಿದರು.

ಪ್ರಮುಖ ಬೇಡಿಕೆಗಳು: ಕಬ್ಬು ಬೆಳೆಗೆ ಸರ್ಕಾರ ನಿಗದಿ ಮಾಡಿರುವ ದರ ಸಾಕಾಲಕ್ಕೆ ರೈತರಿಗೆ ಸಿಗುವಂತಾಗಬೇಕು, ಕಬ್ಬು ಕಟಾವು ಮಾಡುವ ಸಂದರ್ಭದಲ್ಲಿ ರೈತರಿಂದ ಅನಾವಶ್ಯಕ ಹಣ ವಸೂಲಿ ನಿಲ್ಲಿಸಬೇಕು, ಖಾರ್ಖಾನೆಗಳಿಗೆ ಕಬ್ಬು ಸಾಗಿಸುವ ವಾಹನಗಳಿಗೆ ಪಾರದರ್ಶಕ ನಂಬರ್ ಇಲ್ಲದೆ ಸಂಚಾರ ಮಾಡುತ್ತಿರುವ ವಾಹನಗಳ ಮೇಲೆ ಅಧಿಕಾರಿಗಳು ಕ್ರಮ ಜರುಗಿಸಿ ಕಬ್ಬಿನ ವಾಹನಗಳಿಗೆ ಜಿ.ಪಿ.ಎಸ್ ಅಳವಡಿಸಬೇಕು, ಬಗಲೂರ ಮತ್ತು ಘತ್ತರಗಿಯ ವ್ಯಾಪ್ತಿಯ ಭಿಮಾನದಿಯಿಂದ ಮುಳುಗಡೆಯಾದ ರೈತರ ಜಮೀನುಗಳ ಸರ್ವೆ ಸಮೀಕ್ಷೆಯಲ್ಲಿ ರೈತ-ರಿಗೆ ಅನ್ಯಾಯವಾಗಿದೆ ಮತ್ತೊಮ್ಮೆ ಸಮೀಕ್ಷೆ ಮಾಡುವ ಮೂಲಕ ಪ್ರಾಮಾಣಿಕ ರೈತರಿಗೆ ಪರಿಹಾರ ದೊರಕಿಸಿಕೊಡಬೇಕು, ಬಗಲೂರ ಗ್ರಾ.ಪಂ.ನಲ್ಲಿ ಗ್ರಾಮ ಸಭೆ ಮಾಡದೆ 2022–23 ಹಾಗೂ 2023=24ರಲ್ಲಿ ಎಮ್‌ಜಿಎನ್‌ಆರ್‌ಇಜಿಎ ಯೋಜನೆಯ ಮತ್ತು 15ನೇ ಹಣಕಾಸಿನ ಖೊಟ್ಟಿ ಕ್ರಿಯಾಯೋಜನೆ ತೈಯಾರಿಸಿಕೊಂಡು ಕೋಟ್ಯಾಂತರ ಹಣ ಎತ್ತಿ ಹಾಕಿದ್ದನ್ನು ತನಿಕೆಗೊಳಪಡಿಸಬೇಕು, ಆಲಮೇಲ್ ತಾಲೂಕಿನ ಮೋರಟಗಿ ಹೊರ ಪೋಲೀಸ್ ಠಾಣೆಯೂ ಮೋರಟಗಿ ಠಾಣೆಯಣೆಯನ್ನಾಗಿಸಿ ಮೇಲ್ದರ್ಜೆಗೆ ಏರಿಸುವಂತೆ ಇರುವ ಬಹುದಿನಗಳ ಬೇಡಿಕೆ ಈಡೇರಿಸಬೇಕು, ಮೋರಟಗಿ ಸಮುದಾಯ ಆರೋಗ್ಯ ಕೇಂದ್ರದ ವೈದ್ಯೆ ಸಿಬ್ಬಂದಿಗಳ ಕೊರತೆಯಿದ್ದು ಪೂರ್ಣ ಪ್ರಮಾಣದ ವೈದ್ಯರನ್ನು ನೀಡಬೇಕು ಮತ್ತು ಸದ್ಯಕ್ಕೆ ಕರ್ತವ್ಯ ನಿರ್ವಹಿಸುವ ಸಿಬ್ಬಂದಿಗಳು ಅನಧಿಕೃತ ಗೈರು ಹಾಜರಿಯಲ್ಲಿ ಬೇಜವಾಬ್ದಾರಿ ಕರ್ತವ್ಯ ನಿರ್ವಹಿಸುವವರ ಬಗ್ಗೆ ಕ್ರಮ ತೆಗೆದುಕೊಂಡು ಬಹುದಿನಗಳಿಂದ ಕರ್ತವ್ಯ ನಿರ್ವಹಿಸುವ ಸಿಬ್ಬಂದಿಗಳನ್ನು ವರ್ಗಾವಣೆ ಮಾಡಬೇಕು ಮತ್ತು ಮೋರಟಗಿ ಗ್ರಾಮವನ್ನು ಹೋಬಳಿ ಎಂದು ಘೋಷಣೆ ಮಾಡಬೇಕು.

ಪ್ರತಿಭಟನೆ ಸಂದರ್ಭದಲ್ಲಿ ಬಗಲೂರ ಗ್ರಾ.ಪಂ.ಅಧ್ಯಕ್ಷ ಲವಕುಶ ಮೋರಟಗಿ, ಸಿದ್ದಣ್ಣ ಐರೊಡಗಿ, ನಿಂಗಣ್ಣ ವಾಲೀಕಾರ, ಹಾವಣ್ಣ ಕಕ್ಕಳಮೇಲಿ, ಟೀಪು ಅಧ್ಯಕ್ಷ ಸದ್ದಾಂ ಜಮಾದಾರ, ವಾಲ್ಮಿಕಿ ಸಂಘಟನೆ ಅಧ್ಯಕ್ಷ ಸುರೇಶ ವಾಲೀಕಾರ, ಕನಕಸೇನೆ ಅಧ್ಯಕ್ಷ ಮಾಣಿಕ ಮಾಗಣಗೇರಿ, ಭೋವಿ ಸಮಾಜದ ಅಧ್ಯಕ್ಷ ಲಕ್ಷ್ಮಣ ಗೌಂಡಿ, ಭಾಗಣ್ಣ ಕಟ್ಟಿಮನಿ, ಶಿವಪ್ಪ ಮಾನೇಗಾರ, ಅಂಬ್ರೀಷ ದೇವರಮನಿ, ಬಸವರಾಜ ಯಂಟಮಾನ, ಮರಗಪ್ಪ ಮೂಕರ್ತಿಹಾಳ ಇದ್ದರು.

### ವಚನ ಚಿಂತನ 243



**ನಿಮ್ಮಾದ್ಯರ ವಚನವ ಕೇಳಿ ಅಮೃತದ ಕೊಡನ ಕಂಡೆ.**

*ಅಯ್ಯಾ, ನಿಮ್ಮಾದ್ಯರ ವಚನವ ಕೇಳಿ ಎನ್ನಂಗದ ಭಂಗ ಹಿಂಗಿತ್ತು ನೋಡಾ.*
*ಅಯ್ಯಾ, ನಿಮ್ಮ ಶರಣರ ಸಂಗದಿಂದ ಮಹಾಲಿಂಗದ ಸಂಯೋಗವಾಯಿತ್ತು ನೋಡಾ.*
*ಅಯ್ಯಾ, ನಿಮ್ಮ ಶರಣರ ಸಂಗದಿಂದ ಮಹಾಪ್ರಸಾದದ ಪರುಷವ ಕಂಡೆ,*
*ಆ ಪರುಷದ ಮೇಲೆ ಮೂರು ಜ್ಯೋತಿಯ ಕಂಡೆ,*
*ಆ ಜ್ಯೋತಿಯ ಬೆಳಗಿನಲ್ಲಿ ಒಂಬತ್ತು ರತ್ನವ ಕಂಡೆ,*
*ಆ ರತ್ನಂಗಳ ಮೇಲೆ ಒಂದು ಅಮೃತದ ಕೊಡನ ಕಂಡೆ.*
*ಕಂಡವನೆ ಉಂಡ, ಉಂಡವನೆ ಉರಿದ, ಉರಿದವನೆ ಕರದ,*
*ಕರದವನೆ ನೆರದ, ನೆರದವನೆ ಕುರುಹನರಿದ,*
*ಅರಿದವನೆ ನಿಮ್ಮನರಿದವ ಕಾಣಾ ಎನ್ನಯ್ಯಪ್ರಿಯ ಇಮ್ಮಡಿ ನಿಃಕಳಂಕಮಲ್ಲಿಕಾರ್ಜುನಾ.*
*– ಮೋಳಿಗೆ ಮಹಾದೇವಿಯವರು*

ವಚನಗಳನ್ನು ಓದುವ(ಕೇಳುವು)ದ-ರಿಂದಾಗುವ ಪ್ರಯೋಜನವನ್ನು ಮೋಳಿಗೆ ಮಹಾದೇವಿಯವರು ಇಲ್ಲಿ ವಿವರಿಸಿದ್ದಾರೆ. ವಚನ ಸಂಪರ್ಕದಿಂದ ಅಂಗದ ಭಂಗಿತನ ಹರಿದು ಮಹಾಲಿಂಗದ ಸಂಯೋಗ ಸಾಧ್ಯವಾಗುತ್ತದೆ. ಅಂತರಂಗದೊಳಗಿನ ಅಮೃತಕೊಡ ತುಂಬಿಹರಿಯುತ್ತದೆ. ಇಲ್ಲಿ ಮಹಾಪ್ರಸಾದದ ಪರುಷವ ಕಂಡೆ ಎನ್ನುವುದು ಇಷ್ಟಲಿಂಗವನ್ನು ಸೂಚಿಸಿದರೆ ಪರುಷದ ಮೇಲೆ ಮೂರು ಜ್ಯೋತಿಯನ್ನು ಪ್ರಾಣಲಿಂಗ, ಭಾವಲಿಂಗ ಮತ್ತು ಮಹಾಲಿಂಗವನ್ನು ಆ ಜ್ಯೋತಿಯ ಬೆಳಗಿನಲ್ಲಿ ಒಂಬತ್ತು ರತ್ನವ ಕಂಡೆ, ಎನ್ನುವುದು ಅಂಗದೊಳಗಿನ ನವಚಕ್ರಗಳ ಬಗ್ಗೆ ಹಾಗೂ ಇಲ್ಲಿ ಇಷ್ಟಲಿಂಗದ ನಿರೀಕ್ಷೆಯಿಂದ ಜಾಗೃತಗೊಳ್ಳುವ ಮೆದುಳಿನ ಹಿಂಭಾಗದ ಪೀನಿಯಲ್‌ಗ್ರಂಥಿಯನ್ನು ಅಮೃತದ ಕೊಡವೆಂದಿದ್ದಾರೆ, ಅದರ ಮೂಲಕ ಸ್ರವಿಸುವ ದ್ರವ(ಮೆಲಾಟಿನಿನ್)ವೇ ಅಮೃತವೆಂದಿದ್ದಾರೆ. ಅದನ್ನು ಕಂಡವನೆ ಉಂಡ, ಉಂಡವನೆ ಉರಿದ, ಉರಿದವನೆ ಕರದ, ಕರದವನೆ ನೆರದ, ನೆರದವನೆ ಕುರುಹನರಿದ, ಅರಿದವನೆ ನಿಮ್ಮನ-ರಿದವ ಎನ್ನುವಲ್ಲಿ ದೇವನರಿಯಲು ಶರಣರ ವಚನ ಬೇಕು. ಆ ನಿಟ್ಟಿನಲ್ಲಿ ವಚನಾನುಭವವಿರಲಿ.

-ರುದ್ರೇಶ ಕಿತ್ತೂರ, ಮುದ್ದೇಬಿಹಾಳ

# ಮುಲ್ಲಾ ಅಭಿವೃದ್ಧಿ ನಿಗಮ ಸ್ಥಾಪನೆಗೆ ಆಗ್ರಹಿಸಿ ಮನವಿ

**ಉದಯರಶ್ಮಿ ನ್ಯೂಸ್**

ಬಸವನಬಾಗೇವಾಡಿ: ಪಟ್ಟಣದಲ್ಲಿ ಕರ್ನಾಟಕ ಮುಲ್ಲಾ ಅಸೋಸಿಯೇಶನ್ ಸಂಘಟನೆ ಪದಾಧಿಕಾರಿಗಳು ಮಂಗಳವಾರ ಸರ್ಕಾರ ಮುಲ್ಲಾ ಅಭಿವೃದ್ಧಿ ನಿಗಮ ಸ್ಥಾಪನೆ ಮಾಡಬೇಕು ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಮುಖ್ಯಮಂತ್ರಿಗಳಿಗೆ ಮನವಿ ಪತ್ರವನ್ನು ತಹಸೀಲ್ದಾರ ಯಮನಪ್ಪ ಸೋಮನಕಟ್ಟಿ ಅವರಿಗೆ ಸಲ್ಲಿಸಿದರು.



ಅವರು ಸಲ್ಲಿಸಿದ ಮನವಿಯಲ್ಲಿ ರಾಜ್ಯದ 105 ವಿಧಾನಸಭಾ ಮತಕ್ಷೇತ್ರದಲ್ಲಿ ಮುಲ್ಲಾ ಸಮುದಾಯ ಬಾಂಧವರು ಇದ್ದಾರೆ. ಪ್ರತಿ ಕ್ಷೇತ್ರದಲ್ಲಿ 5 ಸಾವಿರದಿಂದ 8 ಸಾವಿರ ಮತದಾರರಿದ್ದಾರೆ. ರಾಜ್ಯ ಮುಸ್ಲಿಂ ಸಮುದಾಯದಲ್ಲಿ 13 ಲಕ್ಷಕ್ಕಿಂತ ಹೆಚ್ಚು ಮುಲ್ಲಾ ಸಮುದಾಯವಿದೆ. ಮುಲ್ಲಾ ಎಂಬ ವ್ಯಕ್ತಿಯು ಇತಿಹಾಸ ಪರಂಪರೆಯಲ್ಲಿ ಪ್ರಮುಖ ಕಾರ್ಯಕ್ರಮಗಳಲ್ಲಿ ಮುಂಚೂಣಿಯಲ್ಲಿರುವುದನ್ನು ನೋಡುತ್ತೇವೆ. ಇಂದು ಈ ಹಕ್ಕನ್ನು ಕಳೆದುಕೊಳ್ಳುವ ಸ್ಥಿತಿ ಉಂಟಾಗಿರುವುದು ವಿಷಾದಕರ ಸಂಗತಿ. ಮುಲ್ಲಾ ಸಮುದಾಯ ಬಾಂಧವರು ಬೇರೆ ಸಮುದಾಯ ಬಾಂಧವರೊಂದಿಗೆ ಸೌಹಾರ್ದತೆಯಿಂದ ಇದ್ದಾರೆ. ನಮ್ಮ ಸಮುದಾಯವು ಕಡುಬಡತನದಿಂದ ಹಿಂದುಳಿದಿದೆ. ಪ್ರತಿ ವರ್ಷ ನಡೆಯುವ ಮೊಹರಂ ಹಬ್ಬದಲ್ಲಿ ಮುಲ್ಲಾ ಸಮುದಾಯ ಬಾಂಧವರು ಸೇವೆ ಮಾಡುವುದು ಮೊದಲಿನಿಂದಲೂ ನಡೆದುಕೊಂಡು ಬಂದಿದೆ. ಹಿಂದೆ ನಮ್ಮ ಸಮುದಾಯವರಿಗೆ ಇನಾಮಿ ಜಮೀನು ನೀಡಿ ಗೌರವಿಸಲಾಗುತ್ತಿತ್ತು. ಇಂದು ಇನಾಮಿ ನೀಡಿರುವ ಜಮೀನು ಮರುಪಡೆದು ವಕ್ಪ ಆಸ್ತಿಯೆಂದು ಘೋಷಣೆ ಮಾಡುತ್ತಿರುವದು ಸರಿಯಲ್ಲ. ಸರ್ಕಾರ ನಮ್ಮ ಸಮುದಾಯಕ್ಕೆ ಅನ್ಯಾಯ ಮಾಡದೇ ಸಮುದಾಯದ ಅಭಿವೃದ್ಧಿಗಾಗಿ ಕರ್ನಾಟಕ ಮುಲ್ಲಾ ಅಭಿವೃದ್ಧಿ ನಿಗಮವನ್ನು ಸ್ಥಾಪನೆ ಮಾಡಬೇಕೆಂದು ಆಗ್ರಹಿಸಲಾಗಿದೆ.

ಗ್ರಾಮ, ನಗರಗಳಲ್ಲಿ ಪ್ರತಿ ವರ್ಷ ನಡೆಯುವ ಮೊಹರಂ ಹಬ್ಬಕ್ಕೆ ಸರ್ಕಾರವು ಸಹಾಯಧನ ನೀಡಬೇಕು. ಮೊಹರಂ ಹಬ್ಬದ ರೂವಾರಿಗಳು, ದರ್ಗಾದ ಮುತವಲ್ಲಿ ಅವರಿಗೆ ಮಾಸಿಕ ಪಿಂಚಣಿ ನೀಡಬೇಕು. ಬೇರೆ ರಾಜ್ಯಯಲ್ಲಿ ಜಾರಿಯಲ್ಲಿರುವಂತೆ ನಮ್ಮ ರಾಜ್ಯದಲ್ಲಿಯೂ ಮುಲ್ಲಾ ಸಮುದಾಯವನ್ನು ಕೆಟಗೇರಿ–1 ವರ್ಗಕ್ಕೆ ಸೇರಿಸಬೇಕೆಂಬ ಬೇಡಿಕೆಗಳನ್ನು ಈಡೇರಿಸುವ ಮೂಲಕ ಮುಲ್ಲಾ ಸಮುದಾಯವನ್ನು ಶೈಕ್ಷಣಿಕವಾಗಿ, ಆರ್ಥಿಕವಾಗಿ, ಸಾಮಾಜಿ-ಕವಾಗಿ ಅಭಿವೃದ್ಧಿಗೆ ಸರ್ಕಾರ ಮುಂದಾಗಬೇಕೆಂದು ಆಗ್ರಹಿಸಲಾಗಿದೆ.

ಈ ಸಂದರ್ಭದಲ್ಲಿ ಮುಲ್ಲಾ ಅಸೊಸಿಯೇಷನ್ದ ಉಪಾಧ್ಯಕ್ಷ ಅಮೀನಸಾ ಮುಲ್ಲಾ, ಯುನಸ್ ಮುಲ್ಲಾ, ಸದ್ದಾಂ ಮುಲ್ಲಾ, ಸಲೀಂ ಮುಲ್ಲಾ, ಮುಸ್ತಾಕ ಮುಲ್ಲಾ, ಆಶೀಫ್ ಮುಲ್ಲಾ, ಎಚ್.ಎಸ್.ಮುಲ್ಲಾ, ಹುಸೇನಸಾಬ ಮುಲ್ಲಾ, ಅಬ್ದುಲ ಮುಲ್ಲಾ ಸೇರಿದಂತೆ ಇತರರು ಇದ್ದರು.

# ಡಿ.24ರ ವೃಕ್ಷಥಾನ್ ಹೆರಿಟೇಜ್ ರನ್‌ಗೆ ಭಾರಿ ಬೆಂಬಲ

**ಉದಯರಶ್ಮಿ ನ್ಯೂಸ್**



ವಿಜಯಪುರ: ಪರಿಸರ ಮತ್ತು ಪ್ರಾಚೀನ ಸ್ಮಾರಕಗಳ ಸಂರಕ್ಷಣೆ ಹಾಗೂ ಜಾಗೃತಿಗಾಗಿ ನಗರದಲ್ಲಿ ಡಿಸೆಂಬರ್ 24 ರಂದು ಆಯೋಜಿಸಲಾಗಿರುವ ವೃಕ್ಷಥಾನ್ ಹೆರಿಟೇಜ್ ರನ್- 2003 ಗೆ ಭಾರಿ ಬೆಂಬಲ ವ್ಯಕ್ತವಾಗುತ್ತಿದೆ. ಈ ಓಟದಲ್ಲಿ ಪ್ರತಿಷ್ಠಿತ ಸೈನಿಕ ಶಾಲೆಯ 450 ವಿದ್ಯಾರ್ಥಿ ಮತ್ತು ಸಿಬ್ಬಂದಿ ಪಾಲ್ಗೊಳ್ಳಲಿದ್ದಾರೆ.

ಮ್ಯಾರಾಥಾನ್ ಕೋರ್ ಕಮಿಟಿಯ ಸಂಚಾಲಕ ಮುರಗೇಶ ಪಟ್ಟಣಶೆಟ್ಟಿ ನೇತೃತ್ವದಲ್ಲಿ ವಿರೇಂದ್ರ ಗುಚ್ಚಟ್ಟಿ, ಡಾ. ದೀಪಕ ಚವ್ಹಾಣ ಹಾಗೂ ಡಾ. ರಾಜು ಯಲಗೊಂಡ ಸೋಮವಾರ ಸೈನಿಕ ಶಾಲೆಯ ಪ್ರಾಚಾರ್ಯೆ ಗ್ರೂಪ್ ಕ್ಯಾಪ್ಟನ್ ಪ್ರತಿಭಾ ಬಿಸ್ಟ್ ಅವರನ್ನು ಬೇಟಿ ಮಾಡಿ ಹೆರಿಟೇಜ್ ರನ್ ಬಗ್ಗೆ ಮಾಹಿತಿ ನೀಡಿದರು. ಇದಕ್ಕೆ ಸ್ಪಂದಿಸಿದ ಪ್ರಾಂಶುಪಾಲರು ಸಂಪೂರ್ಣ ಸಹಕಾರ ನೀಡುವುದಾಗಿ ಭರವಸೆ ನೀಡಿದರು. ಅಲ್ಲದೇ, ಶಾಲೆಯ 450 ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿ ಪಾಲ್ಗೊಳ್ಳಲಿದ್ದಾರೆ ಎಂದು ತಿಳಿಸಿದರು.

ಇದೇ ವೇಳೆ ಕೋರ್ ಕಮಿಟಿ ಸದಸ್ಯರು ಜಿಲ್ಲೆಯ ಹಿರಿಯ ಪೊಲೀಸ್ ಅಧಿಕಾರಿಗಳನ್ನು ಬೇಟಿ ಮಾಡಿ ವೃಕ್ಷಥಾನ್‌ನಲ್ಲಿ ಪಾಲ್ಗೊಳ್ಳಲು ಆಹ್ವಾನ ನೀಡಿದರು. ಇದಕ್ಕೆ ಸ್ಪಂದಿಸಿದ ಡಿವೈ-ಎಸ್ಪಿ, ಸಿಪಿಐ, ಪಿಎಸ್‌ಐ ಮತ್ತಿತರ ಅಧಿಕಾರಿಗಳು ಕೂಡ ಈ ಓಟದಲ್ಲಿ ಪಾಲ್ಗೊಳ್ಳುವುದಾಗಿ ಭರವಸೆ ನೀಡಿದರು.

ಇದೇ ವೇಳೆ, ಕೋರ್ ಕಮಿಟಿ ಸದಸ್ಯರು ನಾನಾ ಶಿಕ್ಷಣ ಸಂಸ್ಥೆಗಳಿಗೂ ಭೇಟಿ ನೀಡಿ ವೃಕ್ಷಥಾನ್‌ನಲ್ಲಿ ಪಾಲ್ಗೊಳ್ಳಲು ಆಹ್ವಾನ ನೀಡಿದರು.

ಮಲೆನಾಡು ಅಲ್ಟ್ರಾ ಮ್ಯಾರಾಥಾನ್ 50 ಕಿ.ಮೀ ನಲ್ಲಿ ಪಾಲ್ಗೊಂಡು ಗಮನ ಸೆಳೆದ ಕಮಿಟಿ ಸದಸ್ಯರು.

ಈ ಮಧ್ಯ ಚಿಕ್ಕಮಗಳೂರು ಜಿಲ್ಲೆಯ ಮಳಂದೂರಿನಲ್ಲಿ ಶನಿವಾರ ನಡೆದ ಮಲೆನಾಡು ಅಲ್ಟ್ರಾ ಮ್ಯಾರಾಥಾನ್‌ನಲ್ಲಿ ಕೋರ್ ಕಮಿಟಿಯ ಸಂಕೇತ ಬಗಲಿ, ರಘು ಸಾಲೋಟಗಿ ಹಾಗೂ ಸಂದೀಪ ಮಡಗೊಂಡ ಗುಡ್ಡಗಾಡಿನಿಂದ ಕೂಡಿರುವ ರಸ್ತೆಯಲ್ಲಿ ಓಡಿ ಪೂರ್ಣಗೊಳಿಸುವ ಮೂಲಕ ಗಮನ ಸೆಳೆದಿದ್ದಾರೆ.

ಸಂಕೇತ ಬಗಲಿ ಮತ್ತು ರಘು ಸಾಲೋಟಗಿ ಅವರು 50 ಕಿ.ಮೀ ಹಾಗೂ ಸಂದೀಪ ಮಡಗೊಂಡ ಅವರು 30 ಕಿ.ಮೀ ಓಟದಲ್ಲಿ ಪಾಲ್ಗೊಂಡು ಗಮನ ಸೆಳೆದಿದ್ದಾರೆ. ಈ ಹಿನ್ನೆಲೆಯಲ್ಲಿ ಸಂಕೇತ ಬಗಲಿ ಮತ್ತು ಸಂದೀಪ ಮಡಗೊಂಡ ಅವರನ್ನು ಇಂದು ಮಂಗಳವಾರ ವಿಜಯಪುರದಲ್ಲಿ ವೃಕ್ಷಥಾನ್ ಹೆರಿಟೇಜ್ ರನ್- 2023 ಕೋರ್ ಕಮಿಟಿ ವತಿಯಿಂದ ಸನ್ಮಾಹಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಡಾ. ಮಹಾಂತೇಶ ಬಿರಾದಾರ, ಮಲೆನಾಡು ಅಲ್ಟ್ರಾ ಮ್ಯಾರಾಥಾನ್‌ನಲ್ಲಿ ಸಂಕೇತ ಬಗಲಿ, ರಘು ಸಾಲೋಟಗಿ ಹಾಗೂ ಸಂದೀಪ ಮಡಗೊಂಡ ಪಾಲ್ಗೊಳ್ಳುವ ಮೂಲಕ ವಿಜಯಪುರ ಜಿಲ್ಲೆಗೆ ಕೀರ್ತಿ ತಂದಿದ್ದಾರೆ. ಸಾಕಷ್ಟು ಸವಾಲುಗಳನ್ನು ಹೊಂದಿರುವ ಮತ್ತು ದುರ್ಗಮ ಹಾದಿ ಹಾಗೂ ಕಾಡಿನಲ್ಲಿ ನಡೆಯುವ ಈ ಓಟದಲ್ಲಿ ಪಾಲ್ಗೊಂಡು ಸಂಪೂರ್ಣವಾಗಿ ಓಡುವ ಮೂಲಕ ಇತರರಿಗೆ ಮಾದರಿಯಾಗಿದ್ದಾರೆ. ಅಲ್ಲದೇ, ವೃಕ್ಷಥಾನ್ ಹೆರಿಟೇಜ್ ರನ್- 2023ಕ್ಕೆ ಮತ್ತಷ್ಟು ಜನ ಹೆಸರು ನೋಂದಾಯಿಸಿಕೊಳ್ಳಲು ಪ್ರೇರಣೆ ನೀಡಿದ್ದಾರೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಶಿವನಗೌಡ ಪಾಟೀಲ, ಸಂತೋಷ ಔರಸಂಗ, ಸೋಮಶೇಖರ ಸ್ವಾಮಿ, ರಾಜು ಯಲಗೊಂಡ, ವಿರೇಂದ್ರ ಗುಚ್ಚಟ್ಟಿ, ಅಪ್ಪು ಭೈರಗೊಂಡ, ಅಬಕಾರಿ ಇಲಾಖೆಯ ಉಪಆಯುಕ್ತ ಡಾ. ಸಂಗನಗೌಡ ಹೊಸಳ್ಳಿ ಮುಂತಾದವರು ಉಪಸ್ಥಿತರಿದ್ದರು.

# ಶಾಸಕ ಅಶೋಕ ಮನಗೂಳಿ ಜನ್ಮದಿನ ಆಚರಣೆ

**ಉದಯರಶ್ಮಿ ನ್ಯೂಸ್**

ಸಿಂದಗಿ: ತಂದೆಯವರಾದ ಮಾಜಿ ಸಚಿವ ದಿ, ಎಂ,ಸಿ,ಮನಗೂಳಿ ಅವರ ದಾರಿಯಲ್ಲಿ ನಡೆದು ಉಪಚುನಾವಣೆಯಲ್ಲಿ ಸೋತರೂ ಕೂಡಾ ಎದೆಗುಂದದೆ ತಾಲೂಕಿನ ಸಮಗ್ರ ಅಭಿವೃದ್ಧಿಯ ಸಂಕಲ್ಪವನ್ನು ಇಟ್ಟುಕೊಂಡು ಪಕ್ಷ ಸಂಘಟನೆ ಮಾಡಿ ಕೇವಲ ಒಂದು ಗ್ರಾಮ ಪಂಚಾಯತಿಯ ಸದಸ್ಯರಾಗದೆ ನೇರವಾಗಿ ಸಿಂದಗಿಯ ಶಾಸಕರಾಗಿ ಆಯ್ಕೆಯಾಗಿ ಜನಸೇವೆಯೇ ಜನಾರ್ಧನ ಸೇವೆ ಎಂದು ಅಭಿವೃದ್ದಿಯತ್ತ ಧಾಪುಗಾಲು ಹಾಕುತ್ತಿರುವ ಶಾಸಕ ಅಶೋಕ ಮನಗೂಳಿ ಮುಂಬರುವ ದಿನಗಳಲ್ಲಿ ಸಚಿವರಾಗಿ ಹೊರಹೊಮ್ಮಲಿ ಎಂದು ಕಾಂಗ್ರೆಸ್ ಮುಖಂಡ ಸಲೀಮ್ ಕಣ್ಣಿ ಹೇಳಿದರು.

ಶಾಸಕ ಅಶೋಕ್ ಮನಗೂಳಿ ಅವರ 55ನೇ ಹುಟ್ಟು ಹಬ್ಬದ ಪ್ರಯುಕ್ತ ಪಟ್ಟಣದ ಸರ್ಕಾರಿ ಶಾಲೆಯ ಮಕ್ಕಳಿಗೆ ನೋಟಬುಕ್ ಪೆನ್ ವಿತರಿಸಿ ಅವರು ಮಾತನಾಡಿದರು.

ತಮ್ಮ ಇಡೀ ಜೀವನವನ್ನೆ ಮೈಗೂಡಿಸಿಕೊಂಡು ರಾಜಕೀಯ ಜೀವನಕ್ಕೆ ಹೆಜ್ಜೆ ಇಟ್ಟು ತಂದೆಯವರು ಹಾಕಿಕೊಟ್ಟ ದಾರಿಯಲ್ಲಿ ನಡೆಯುತ್ತ ತಾವು ಶಾಸಕರಾದ ಕೂಡಲೇ ನನ್ನ ನಡೆ ಅಭಿವೃದ್ದಿಯ ಕಡೆ ಎನ್ನುವ ಗುರಿ, ಶಿಕ್ಷಣ ಮತ್ತು ಆರೋಗ್ಯ ಕ್ಷೇತ್ರಕ್ಕೆ ಮೊದಲ ಆದ್ಯತೆ ನೀಡುತ್ತೇನೆ ಎಂದು



ರಾಜಕೀಯಕ್ಕೆ ಮುಡುಪಾಗಿಟ್ಟಿದ್ದ ದಿ,ಎಂ,ಸಿ,ಮನಗೂಳಿ ಅವರು ರೈತರ ಪಾಲಿಗೆ ಆಶಾ ಕಿರಣರಾಗಿ ನಿಂತು ಗುತ್ತಿ ಬಸವಣ್ಣ ಏತ ನೀರಾವರಿ ಕಾಲುವೆಯ ಮುಖಾಂತರ ನೀರು ಹರಿಸಿ ರೈತರ ಪಾಲಿಗೆ ಮತ್ತು ಸಿಂದಗಿ ಪಟ್ಟಣದ ಜನತೆಯ ಪಾಲಿಗೆ ನೀರಾವರಿ ಹರಿಕಾರ ಎಂಬ ಬಿರುದನ್ನು ಪಡೆದು ಅಸು ನೀಗಿದ್ದಾರೆ. ಅವರು ಮರೆಯಾದರೂ ಅವರ ಹೇಸರು ಅಜರಾಮರ. ಅವರ ಆದರ್ಶ ನಿಷ್ಠೆ ಪ್ರಾಮಾಣಿಕತೆ ಹೇಳಿ ಸರಕಾರಿ ಆರೋಗ್ಯ ಕೇಂದ್ರಗಳ ಮತ್ತು ಶಿಕ್ಷಣ ಸಂಸ್ಥೆಗಳು ಅಭಿವೃದ್ದಿ ಪಡಿಸುವ ನಿಟ್ಟಿನಲ್ಲಿ ಸಾಗುತ್ತಿದ್ದಾರೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಪುರಸಭೆ ಮಾಜಿ ಅಧ್ಯಕ್ಷ ಹಾಸಿಂಪಿರ್ ಆಳಂದ, ಸುನಂದ ಯಂಪೂರೆ, ರಜತ್ ತಾಂಬೆ, ಜೋತಿ ಗುಡಿಮನಿ, ಶರಣಮ್ಮ ನಾಯಕ್, ಸೇರಿದಂತೆ ಕಾರ್ಯಕರ್ತರು, ಶಾಲಾ ಸಿಬ್ಬಂದಿ ವರ್ಗ ಸೇರಿದಂತೆ ವಿಧ್ಯಾರ್ಥಿಗಳು ಇದ್ದರು.

## ಕೋರವಾರ ಗ್ರಾಮದಲ್ಲಿ ಹಜರತ್ ಟಿಪ್ಪು ಸುಲ್ತಾನ ಜಯಂತ್ಯೋತ್ಸವ

# ಟಿಪ್ಪು ಸುಲ್ತಾನ ನಿತ್ಯ ಸ್ಮರಣೀಯರು :ಡಾ.ಪ್ರಭುಗೌಡ

**ಉದಯರಶ್ಮಿ ನ್ಯೂಸ್**



ದೇವರಹಿಪ್ಪರಗಿ: ದೇಶದ ಸ್ವಾತಂತ್ರ್ಯಕ್ಕಾಗಿ ತನ್ನ ಮಕ್ಕಳನ್ನೇ ಒತ್ತೆಯಿಟ್ಟು ವೀರ ಮರಣವನ್ನಪ್ಪಿದ ಮೈಸೂರ ಹುಲಿ ಟಿಪ್ಪುಸುಲ್ತಾನ್ ನಮಗೆಲ್ಲ ಮಾದರಿಯಾಗಿದ್ದಾರೆ. ಇವರ ಧೈರ್ಯ ಶೌರ್ಯ ದೇಶಪ್ರೇಮ, ಸಾಮಾಜಿಕ ಕಳಕಳಿ ನಮಗೆ ಮಾರ್ಗದರ್ಶನವಾಗಿದೆ ಎಂದು ಅನುಗ್ರಹ ಕಣ್ಣಿನ ಆಸ್ಪತ್ರೆ ಮುಖ್ಯಸ್ಥ ಡಾ.ಪ್ರಭುಗೌಡ ಲಿಂಗದಳ್ಳಿ ಹೇಳಿದರು.

ಸಮೀಪದ ಕೋರವಾರ ಗ್ರಾಮದಲ್ಲಿ ಹಮ್ಮಿಕೊಂಡ ಹಜರತ್ ಟಿಪ್ಪು ಸುಲ್ತಾನರ ಜಯಂತ್ಯೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ದೇಶಕ್ಕಾಗಿ ಮಡಿದವರನ್ನು ಸ್ಮರಿಸುವುದು ನಮ್ಮ ಆದ್ಯ ಕರ್ತವ್ಯವಾಗಬೇಕು. ಸಮಾಜ ಸುಧಾರಣೆಯ ಜೊತೆಗೆ ಉತ್ತಮ ಆಡಳಿತ ನೀಡಿದ ಟಿಪ್ಪು ಸುಲ್ತಾನ ಅವರು ನಿತ್ಯ ಸ್ಮರಣಿಯರಾಗಿದ್ದಾರೆ. ಇವರ ತತ್ವಾದರ್ಶಗಳನ್ನು ಅಳವಡಿಸಿಕೊಂಡು ಸಾಗೋಣ ಎಂದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಡಿಎಸ್-ಎಸ್ ಪ್ರಮುಖ ವೈ ಸಿ ಮಯೂರ, ಬಿಎಸ್‌ಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ದಸ್ತಗೀರ ಮುಲ್ಲಾ ಮಾತನಾಡಿ, ದೇಶ ಕಂಡ ಅಪರೂಪ ವ್ಯಕ್ತಿತ್ವದ ಟಿಪ್ಪು ಸುಲ್ತಾನ ಸಮಸಮಾಜಕ್ಕಾಗಿ ಹೋರಾಡಿದವರಾಗಿದ್ದಾರೆ. ಹತ್ತಾರು ಯೋಜನೆಗಳ ಮೂಲಕ ಜನಮಾನಸದಲ್ಲಿ ಉಳಿದಿದ್ದು, ಅವರ ಕಾರ್ಯಗಳು ಅಜರಾಮರವಾಗಿವೆ. ಮಹಿಳೆಯರನ್ನು ಅತ್ಯಂತ ಗೌರವದಿಂದ ಕಾಣುತ್ತಿದ್ದು, ಸಮ ಸಮಾಜ ನಿರ್ಮಾಣಕ್ಕೆ ಕಂಕಣಬದ್ದರಾಗಿದ್ದರು. ಹೇಡಿತನದಿಂದ ಸಾಯದೇ ಸಮರ ಸಂಗ್ರಾಮದಲ್ಲಿ ವೀರಮರಣ ಹೊಂದಿದ ಧೀರರಾಗಿದ್ದಾರೆ. ನಮಗೆಲ್ಲ ಸದಾ ಆದರ್ಶಪ್ರಿಯರಾಗಿದ್ದಾರೆ ಎಂದರು. ಪಿಕೆಪಿಎಸ್ ಅಧ್ಯಕ್ಷ ಸಂಗಮೇಶ ಛಾಯಾಗೋಳ, ಜೆಡಿಎಸ್ ಪ್ರದಾನ ಕಾರ್ಯದರ್ಶಿ ಶೇಖರಗೌಡ ಪಾಟೀಲ ಸೇರಿದಂತೆ ಮತ್ತೀತರರು ಮಾತನಾಡಿದರು.

ಜೆಡಿಎಸ್ ಜಿಲ್ಲಾ ಉಪಾಧ್ಯಕ್ಷ ರಿಯಾಜ ಯಲಗಾರ, ಗ್ರಾಪಂ ಮಾಜಿ ಅಧ್ಯಕ್ಷ ರಾಜಶೇಖರ ಛಾಯಾಗೋಳ ದ್ವಜಾರೋಹಣ ನೆರವೇರಿಸಿದರು. ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಬಸೀರಹಮ್ಮದ ಬೇಪಾರಿ ಮಾಲಾರ್ಪಣೆ ಮಾಡಿದರು. ಗ್ರಾಪಂ ಅಧ್ಯಕ್ಷ ರಫೀಕ ಬ್ಯಾಕೋಡ ಅಧ್ಯಕ್ಷತೆ ವಹಿಸಿದ್ದರು.

ಕಾರ್ಯಕ್ರಮದಲ್ಲಿ ಕಸಾಪ ಅಧ್ಯಕ್ಷ ಕಬೂಲ್ ಕೊಕಟನೂರ, ಮುಖಂಡರಾದ ಶ್ರೀನಾಥಗೌಡ ಪಾಟೀಲ, ಸಾಧಿಕ ಸುಂಬಡ, ಬಾಪುಗೌಡ ಬಿರಾದಾರ, ಭಿಮನಗೌಡ ಕುಳೆಕುಮಟಗಿ, ಚಿತ್ರಸೇನ ಆಲಗೂರ, ಕಲ್ಲನಗೌಡ ಸುಂಕದ, ಯುನೂಸ್ ನಾಯ್ಕೋಡಿ, ಸಂಗಮೇಶ ಮ್ಯಾಗೇರಿ, ಸುನೀಲಗೌಡ ಪಾಟೀಲ, ಮಹಾಂತಗೌಡ ಸುಂಬಡ, ಅರುಣ ಕೋರವಾರ, ಫಯಾಜ್ ಪಟೇಲ, ಯಾಸೀನ ವಡಗೇರಿ, ಬಸೀರ್ ಮುರುಡಿ, ಗೌಡಪ್ಪಗೌಡ ಪಾಟೀಲ, ರುಕುಂ ಪಟೇಲ ವಡಗೇರಿ, ಮೊದೀನ್ ಶಾಬಾದಿ, ಇಸ್ಮಾಯಿಲ್ ಕೆರುಟಗಿ, ಮಹಮ್ಮದರಫೀಕ ಮೊಮೀನ, ಮೈನು ಶೇಖ, ಅಯ್ಯೂಬ ತುರಕನಗೇರಿ, ನೂರಹಮ್ಮದ ನಂದ್ಯಾಳ, ಸಮೀರ ಸಿಂದಗಿ, ಕಾಶೀಂ ನಾಯ್ಕೋಡಿ, ಸೇರಿದಂತೆ ವಿವಿಧ ಸಂಘಟನೆ ಪದಾಧಿಕಾರಿಗಳು, ಕಾರ್ಯಕರ್ತರು ಉಪಸ್ಥಿತರಿದ್ದರು.

## ಕಾರ್ಯನಿರತ ಪತ್ರಕರ್ತರ ಸಂಘ & ರಾಜ್ಯ ವಿತರಕರ ಒಕ್ಕೂಟದಿಂದ ಅಭಿನಂದನೆ

# ಪತ್ರಿಕಾ ವಿತರಕರಿಗೆ ಸಾಮಾಜಿಕ ಭದ್ರತೆ ಕಲ್ಪಿಸಲು ಯೋಜನೆ :ಸಚಿವ ಲಾಡ್

**ಉದಯರಶ್ಮಿ ನ್ಯೂಸ್**



ಬೆಂಗಳೂರು: ಪತ್ರಿಕಾ ವಿತರಕರು ಶ್ರಮಜೀವಿಗಳಾಗಿದ್ದು, ಅವರಿಗೆ ಸಾಮಾಜಿಕ ಭದ್ರತೆ ಕಲ್ಪಿಸಲು ಹೊಸದಾಗಿ ಯೋಜನೆ ರೂಪಿಸಿ, ಅಪಘಾತದಲ್ಲಿ ಮೃತಪಟ್ಟ ಪತ್ರಿಕಾ ವಿತರಕರಿಗೆ 2 ಲಕ್ಷ ವೈದ್ಯಕೀಯ ನೆರವಿಗೆ 1 ಲಕ್ಷ ರೂ ನೆರವಿನ ಯೋಜನೆಯನ್ನು ಜಾರಿಗೆ ತರಲಾಗಿದೆ ಎಂದು ಕಾರ್ಮಿಕ ಸಚಿವ ಸಂತೋಷ್ ಲಾಡ್ ಹೇಳಿದ್ದಾರೆ.

ಪತ್ರಿಕಾ ವಿತರಕರ ಸಮಸ್ಯೆಗೆ ಸ್ಪಂಧಿಸಿ ಯೋಜನೆಯನ್ನು ಜಾರಿಗೊಳಿಸಿದ್ದಕ್ಕಾಗಿ ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘ(ಏಗಘಾಎ) ಮತ್ತು ಕರ್ನಾಟಕ ರಾಜ್ಯ ಪತ್ರಿಕಾ ವಿತರಕರ ಒಕ್ಕೂಟದ ಅಭಿನಂದನೆ ಸ್ವೀಕರಿಸಿ ಮಾತನಾಡಿದ ಅವರು, ಅಸಂಘಟಿತ ವಲಯದಲ್ಲಿರುವ ಎಲ್ಲರಿಗೂ ಸಾಮಾಜಿಕ ಭದ್ರತೆ ಕಲ್ಪಿಸಬೇಕು ಎನ್ನುವ ನಿಟ್ಟಿನಲ್ಲಿ ಪ್ರಯತ್ನ ನಡೆದಿದ್ದು, ಮೊದಲ ಹಂತವಾಗಿ ಪತ್ರಿಕಾ ವಿತರಕರಿಗೆ ಯೋಜನೆಯನ್ನು ಜಾರಿಗೆ ನೀಡಲಾಗಿದೆ ಎಂದರು.

ಸದುದ್ದೇಶಕ್ಕಾಗಿ ರೂಪಿಸಿರುವ ಯೋಜನೆ ದುರ್ಬಳಕೆ ಆಗಬಾರದು. ನಿಜವಾದ ಪತ್ರಿಕಾ ವಿತರಕರಿಗೆ ನೆರವಾಗುವಂತೆ ಮಾಡಲು ಸರ್ಕಾರ ನೀತಿ ನಿಯಮಾವಳಿ ರೂಪಿಸಲಿದ್ದು, ಅದಕ್ಕಾಗಿ ನಿಮ್ಮೆಲ್ಲರ ಸಹಕಾರವೂ ಮುಖ್ಯವಾಗಿದೆ ಎಂದರು.

ಯೋಜನೆಯನ್ನು ಜಾರಿಗೆ ನೀಡಲು ಸಿಎಂ ಸಿದ್ದರಾಮಯ್ಯ ಅವರ ಸಹಕಾರ ಕಾರಣ. ಸಿಎಂ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್ ಅವರು ಕಾಳಜಿ ವಹಿಸಿದ್ದರು ಎಂದರು.

ವಿಶೇಷವಾಗಿ ಕೆಯುಡಬ್ಲೂಣಟಿ-ಜಜಜಿಟಿಜಜಜೆ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು, ತಮ್ಮನ್ನು ಆಗಾಗ್ಗೆ ಭೇಟಿ ಮಾಡಿ ವಿತಕರಿಗಾಗಿ ಯೋಜನೆ ಜಾರಿಗೆ ಒತ್ತಡ ತಂದಿದ್ದರು ಎಂದು ತಿಳಿಸಿದ ಕಾರ್ಮಿಕ ಸಚಿವರು, ಇದೇ ಸಂದರ್ಭದಲ್ಲಿ ವಿತರಕರ ಸಮ್ಮುಖದಲ್ಲಿ ಅವರನ್ನು ಅಭಿನಂದಿಸಿದರು.

ಕರ್ನಾಟಕ ರಾಜ್ಯ ಪತ್ರಿಕಾ ವಿತರಕರ ಒಕ್ಕೂಟದ ಅಧ್ಯಕ್ಷ ಕೆ.ಶಂಭುಲಿಂಗ, ಪ್ರಧಾನ ಕಾರ್ಯದರ್ಶಿ ಸಂಗಮ್ ಸುರೇಶ್ ಅವರು, ಕಾರ್ಮಿಕ ಇಲಾಖೆ ತಂದ ಈ ಯೋಜನೆಯಿಂದ ಪತ್ರಿಕಾ ವಿತರಕರಿಗೆ ಸರ್ಕಾರದಿಂದ ದೊಡ್ಡ ಭರವಸೆ ದೊರೆತಂತಾಗಿದೆ ಎಂದು ಶ್ಲಾಸಿ, ವಿತರಕರ ಪರವಾಗಿ ಕಾರ್ಮಿಕ ಸಚಿವರನ್ನು ಅಭಿನಂದಿಸಿದರು.

ರಾಜ್ಯ ಪತ್ರಿಕಾ ವಿತರಕರ ಸಂಘದ ಪದಾಧಿಕಾರಿಗಳಾದ ಎಂ.ಟಿ.ಗೋಪಾಲ್,ಎಂ.ಆರ್. ಶ್ರೀನಿವಾಸ್, ಎನ್.ದೇವರಾಜ್, ಶಿವಶಾಂತ್, ನಾರಾಯಣಸ್ವಾಮಿ, ಬಿಯುಡಬ್ಲೂಣಟಿಜಜಜಿಟಿಜಜಜೆ ಉಪಾಧ್ಯಕ್ಷ ಜುಕ್ರಿಯಾ ಮತ್ತಿತರರು ಹಾಜರಿದ್ದರು

# ಮಸಬಿನಾಳ ಗೌರಿಶಂಕರ ಜಾತ್ರಾಮಹೋತ್ಸವದ ಕಾರ್ಯಕ್ರಮಗಳು

**ಉದಯರಶ್ಮಿ ನ್ಯೂಸ್**

ಬಸವನಬಾಗೇವಾಡಿ: ತಾಲೂಕಿನ ಸ್ವಾತಂತ್ರ್ಯಯೋಧರ ಗ್ರಾಮ ಮಸಬಿನಾಳ ಗ್ರಾಮದ ಗೌರಿಶಂಕರ ಜಾತ್ರಾಮಹೋತ್ಸವದಂಗವಾಗಿ ನ. 27 ರಿಂದ ಡಿ.2 ರವರೆಗೆ ವಿವಿಧ ಕಾರ್ಯಕ್ರಮಗಳು ನಡೆಯಲಿವೆ.



ಗ್ರಾಮದ ವಿಷ್ಣು ಬಡಿಗೇರ ಅವರ ಮನೆಯಿಂದ ಸೋಮವಾರ ಬೆಳಗ್ಗೆ ಸಕಲ ವಾದ್ಯಮೇಳದೊಂದಿಗೆ ಗೌರಿಶಂಕರ ಮೂರ್ತಿಗಳು ಮೆರವಣಿಗೆ ಮೂಲಕ ಗೌರಿಶಂಕರ ದೇವಸ್ಥಾನದಲ್ಲಿ ಪ್ರತಿಷ್ಠಾಪನೆಗೊಂಡವು. ನ.30 ರಂದು ಸಂಜೆ 6 ಗಂಟೆಗೆ ಸ್ವಾಮಿ ವಿವೇಕಾನಂದ ಸ್ವ ಸಹಾಯ ಸಂಘದ ಗೆಳೆಯರ ಬಳಗ ಹಾಗೂ ಕನ್ನಡ ಮತ್ತು ಸಾಂಸ್ಕೃತಿಕ ಇಲಾಖೆಯ ಸಹಯೋಗದಲ್ಲಿ ಸಾಂಸ್ಕೃತಿಕ ಹಬ್ಬ ಕಾರ್ಯಕ್ರಮ ಹಮ್ಮಿಕೊಂಡಿದೆ. ಸಾನಿಧ್ಯವನ್ನು ಮಸಬಿನಾಳದ ಸಿದ್ದರಾಮ ಸ್ವಾಮೀಜಿ, ನೇತೃತ್ವವನ್ನು ಸೊನ್ನದ ಶಿವಾನಂದ ಸ್ವಾಮೀಜಿ, ಸಮ್ಮುಖವನ್ನು ನೆಲೋಗಿಯ ಸಿದ್ದಲಿಂಗ ಸ್ವಾಮೀಜಿ ವಹಿಸುವರು. ಸಚಿವ ಶಿವಾನಂದ ಪಾಟೀಲ ಕಾರ್ಯಕ್ರಮ ಉದ್ಘಾಟಿಸುವರು. ಅಧ್ಯಕ್ಷತೆಯನ್ನು ಮಸಬಿನಾಳ ಗ್ರಾಮ ಪಂಚಾಯಿತಿ ಅಧ್ಯಕ್ಷೆ ರಮಿಜಾ ಬಾಬುಲಾಲ ಮೈರಾ ವಹಿಸುವರು. ಮುಖ್ಯ ಅತಿಥಿಗಳಾಗಿ ಜಿಲ್ಲಾ ಕಸಾಪ ಅಧ್ಯಕ್ಷ ಹಾಸಿಂಪೀರ ವಾಲೀಕಾರ, ಕನ್ನಡ ಮತ್ತು ಸಂಸ್ಕøತ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ ಆಗಮಿಸುವರು. ವಿಜಯಪುರದ ಸನ್ನಿಧಿ ನೃತ್ಯ ಕಲಾ ಸಂಸ್ಥೆಯಿಂದ ಸಮೂಹ ನೃತ್ಯ, ಬಳ್ಳಾರಿಯ ಜಡ್ಡೇಶ ಎಮ್ಮಿಗನೂರ ಜಾನಪದ ಸಂಗೀತ ಕಲಾ ತಂಡದಿಂದ ಸಂಗೀತ ಸುಧೆ, ದುರ್ಗೇಶ ಹಿರೇಮನಿ ಮತ್ತು ಅನಿತಾ ಅಯ್ಯರ ಇವರಿಂದ ರಸಮಂಜರಿ, ಅಯೂಬ ಧನ್ನೂರ ಅವರಿಂದ ಜಾದೂ ಪ್ರದರ್ಶನ ನಡೆಯಲಿದೆ.

ಡಿ.1 ರಂದು ಸಂಜೆ 5 ಗಂಟೆಗೆ ಗೌರಿಶಂಕರ ಜಾತ್ರಾಮಹೋತ್ಸದಂಗವಾಗಿ ಭವ್ಯ ರಥೋತ್ಸವ ಜರುಗಲಿದೆ. ರಾತ್ರಿ ಸುಂದರ ಸಾಮಾಜಿಕ ನಾಟಕ ಪ್ರದರ್ಶನವಿದೆ. ಡಿ.2 ರಂದು ಬೆಳಗ್ಗೆ 10 ಗಂಟೆಗೆ ಭಾರ ಎತ್ತುವ ಕಾರ್ಯಕ್ರಮ, ಸಂಜೆ ಆಕರ್ಷಕ ಸಿಡಿಮದ್ದು ಸುಡುವ ಕಾರ್ಯಕ್ರಮ, ರಾತ್ರಿ 9 ಗಂಟೆಗೆ ಗೌರಿಶಂಕರ ಮೂರ್ತಿ ವಿಸರ್ಜನೆ, ರಾತ್ರಿ 10 ಗಂಟೆಗೆ ನಾಟಕ ಪ್ರದರ್ಶನವಿದೆ ಎಂದು ಗೌರಿಶಂಕರ ಜಾತ್ರಾಮಹೋತ್ಸವ ಸಮಿತಿಯು ತಿಳಿಸಿದೆ.

# ವಿಕಲಚೇತನರು ಮಾನಸಿಕ ಆರೋಗ್ಯ ಕಾಪಾಡಿಕೊಳ್ಳಲು ಕರೆ

**ಉದಯರಶ್ಮಿ ನ್ಯೂಸ್**



ವಿಜಯಪುರ: ಬೆನ್ನುಹುರಿ ಅಪಘಾತ ವಿಕಲಚೇತನರು ಮಾನಸಿಕ ಸ್ಥೈರ್ಯ ಕಳೆದುಕೊಳ್ಳಬಾರದು. ಸೂಕ್ತ ಚಿಕಿತ್ಸೆ ಪಡೆದು, ಮಾನಸಿಕ ಹಾಗೂ ದೈಹಿಕ ಆರೋಗ್ಯ ಕಾಪಾಡಿಕೊಳ್ಳಬೇಕು ಎಂದು ಅಲ್‌ಅಮಿನ್ ಮೆಡಿಕಲ್ ಕಾಲೇಜ್‌ನ ಡಾ.ಜಿಲಾನಿ ಅವಟಿ ಕರೆ ನೀಡಿದರು.

ಜಿಲ್ಲಾ ವಿಕಲಚೇತನ ಹಾಗೂ ಹಿರಿಯ ನಾಗರಿಕ ಸಬಲೀಕರಣ ಇಲಾಖೆ, ಎಪಿಸಿ ಸಂಸ್ಥೆ ವಿಜಯಪುರ ಎಚ್ ಸಿ ಎಲ್ ಫೌಂಡೇಶನ್ ಅಲ್ ಅಮಿನ್ ಮೆಡಿಕಲ್ ಕಾಲೇಜ್, ಬೆನ್ನು ಹುರು ಅಪಘಾತ ವಿಕಲಚೇತನರ ಸಂಘ ಹಾಗೂ ಅನೌಪಚಾರಿಕ ಶಿಕ್ಷಣ ಸಂಸ್ಥೆ ಇವರ ಸಂಯುಕ್ತ ಆಶ್ರಯದಲ್ಲಿ 3 ದಿನಗಳ ಬೆನ್ನುಹುರಿ ಅಪಘಾತಕ್ಕೊಳಗಾದ ವ್ಯಕ್ತಿಗಳಿಗೆ ಆರೋಗ್ಯ ತಪಾಸಣೆ ವ್ಯಾಯಾಮ ಮತ್ತು ಉದ್ಯಮಶೀಲತೆ ತರಬೇತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಸರ್ಕಾರದೊಂದಿಗೆ ಕೈ ಜೋಡಿಸಿ ಸಂಘ ಸಂಸ್ಥೆಗಳು ವಿಕಲಚೇತನರ ಶ್ರೇಯೋಭಿವೃಧಿಗೆ ಶ್ರಮಿಸುತ್ತಿರುವದು ಸ್ತುತ್ಯಾರ್ಹ. ಮೂರು ದಿನಗಳ ಕಾಲ ಚಿಕಿತ್ಸೆ ಪಡೆದುಕೊಂಡು ಇಲ್ಲಿ ನೀಡಿದ ಸಲಹೆ ಸೂಚನೆಗಳನ್ನು ಚಾಚೂ ತಪ್ಪದೆ ಪಾಲಿಸಿ ದೈಹಿಕ ಮಾನಸಿಕ ಆರೋಗ್ಯ ಕಾಪಾಡಿಕೊಳ್ಳಬೇಕು ಎಂದು ಅವರು ಹೇಳಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ವಿಕಲಚೇತನ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಅಧಿಕಾರಿ ರಾಜಶೇಖರ ದೈವಾಡಿ, ಪ್ಲಾಸ್ಟಿಕ್ ಸರ್ಜನ್ ಡಾ.ಅಜಿಜುಉಲ್ಲಾ, ಡಾ. ಶಾಹೀನ್ ಕುಡಚಿ, ಅನೌಪಚಾರಿಕ ಶಿಕ್ಷಣ ಸಂಸ್ಥೆ ನಿರ್ದೇಸಕ ಫಾದರ ಡಿವೂಲ್ ಮಜಾದೊ, ಫಿಜಿಯೋಥೆರಪಿಸ್ಟ್ ಡಾ. ಶ್ರುತಿ ಗಚ್ಚಿ ಶಿಸ್ಟರ್ ಅಮೇಲಾ, ಭಾಗ್ಯಶ್ರೀ ಬೋರಗಿ, ಎನ್ ಪಾಲಸ್ವಾಮಿ ಉಪಸ್ಥಿತರಿದ್ದರು.

ವಿಶ್ವ ದತ್ತು ಮಾಸಾಚರಣೆ ಮತ್ತು ಮಕ್ಕಳ ದಿನಾಚರಣೆಯಲ್ಲಿ ಹೆಚ್ಚುವರಿ ಎಸ್ಪಿ ಶಂಕರ ಮಾರಿಹಾಳ ಸ್ಪಷ್ಟನೆ

# ಅನಧಿಕೃತ ಮಕ್ಕಳ ದತ್ತು ಕಾನೂನುಬಾಹಿರ

ಉದಯರಶ್ಮಿ ನ್ಯೂಸ್




ವಿಜಯಪುರ: ಅನಧಿಕೃತವಾಗಿ ಮಕ್ಕಳನ್ನು ದತ್ತು ಪಡೆದುಕೊಳ್ಳುವುದು ಕಾನೂನು ಬಾಹಿರವಾಗಿದೆ. ಕಾನೂನು ಬದ್ಧವಾಗಿ ಅಗತ್ಯ ದಾಖಲಾತಿಗಳೊಂದಿಗೆ ದತ್ತು ಸ್ವೀಕಾರ ಕೇಂದ್ರ ಸಂಪರ್ಕಿಸಿ ದತ್ತು ಪಡೆದುಕೊಳ್ಳಬೇಕು. ಮಕ್ಕಳ ಹಕ್ಕುಗಳ ರಕ್ಷಣೆಯಾಗುವಂತೆ ನೋಡಿಕೊಳ್ಳಬೇಕು ಎಂದು ಹೆಚ್ಚುವರಿ ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಶಂಕರ ಮಾರಿಹಾಳ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಕಾರ್ಮಿಕ ಇಲಾಖೆ, ಜಿಲ್ಲಾ ಬಾಲಭವನ, ಸರ್ಕಾರಿ ಮಕ್ಕಳ ಪಾಲನಾ ಸಂಸ್ಥೆಗಳು ಹಾಗೂ ಸ್ವಯಂ ಸೇವಾ ಸಂಸ್ಥೆಗಳ ಸಹಯೋಗದಲ್ಲಿ ಮಂಗಳವಾರ ನಗರದ ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರದಲ್ಲಿ ಆಯೋಜಿಸಲಾದ ಅಂತರರಾಷ್ಟ್ರೀಯ ದತ್ತು ಮಾಸಾಚರಣೆ ಮತ್ತು ಮಕ್ಕಳ ದಿನಾಚರಣೆ ಕಾರ್ಯಕ್ರಮದಲ್ಲಿ ಪಂಡಿತ ಜವಾಹರಲಾಲ ನೆಹರು ಭಾವಚಿತ್ರಕ್ಕೆ ಪುಷ್ಪಾರ್ಚಣೆ ಮಾಡುವ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು.

ಮಕ್ಕಳಿಗೆ ಉತ್ತಮ ಶಿಕ್ಷಣ ನೀಡುವುದು ಪೋಷಕರ ಜವಾಬ್ದಾರಿ. ಪಠ್ಯ ಮತ್ತು ಪಠ್ಯೇತರ ಚಟುವಟಿ–ಕೆಗಳನ್ನು ತೊಡಗಿಸಿಕೊಳ್ಳುವಂತೆ ನೋಡಿಕೊಳ್ಳಬೇಕು. ಸೃಜನಾತ್ಮಕ ಚಟುವಟಿಕೆಗಳಲ್ಲಿ ಹೆಚ್ಚೆಚ್ಚು ಪಾಲ್ಗೊಳ್ಳಬೇಕು. ಮಕ್ಕಳ ಸುಂದರ ಬಾಲ್ಯವನ್ನು ರೂಪಿಸುವ ಹೊಣೆ ಪ್ರತಿ ಪೋಷಕ–ಪಾಲಕರ ಜವಾಬ್ದಾ–ರಿಯಾಗಿದೆ. ಮಕ್ಕಳಿಗೆ ಉತ್ತಮ ಶಿಕ್ಷಣ ನೀಡುವ ಮೂಲಕ ಅವ–ರಿಗೆ ದೇಶದ ಆಸ್ತಿಯನ್ನಾಗಿಸಬೇಕು. ಶಿಕ್ಷಣದೊಂದಿಗೆ ಸಂಸ್ಕಾರ ನೀಡಬೇಕು. ದೇಶದ ಸಂಪದ್ಭರಿತ ಸಂಸ್ಕೃತಿ ಹಿರಿಮೆ ಗರಿಮೆ ಕುರಿತು ಬಾಲ್ಯದಿಂದಲೇ ಮಕ್ಕಳಲ್ಲಿ ಬೆಳೆಸಬೇಕು ಎಂದು ಹೇಳಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ ಇಲಾಖೆ ಉಪನಿರ್ದೇಶಕ ಕೆ.ಕೆ.ಚವ್ಹಾಣ ಅವರು ಮಾತನಾಡಿ, ಬಾಲ್ಯ ವಿವಾಹ ತಡೆಗಟ್ಟಲು ಹಾಗೂ ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆಗಾಗಿ ಅರಿವು ಮತ್ತು ಜಾಗೃತಿ ಅಭಿಯಾನ ಹಲವು ಇಲಾಖೆಗಳ ಮೂಲಕ ಹಮ್ಮಿಕೊಂಡು ಜನರಲ್ಲಿ ಅರಿವು ಮೂಡಿಸಲಾಗುತ್ತಿದೆ. ಹೆಣ್ಣು ಮಕ್ಕಳ ಶಿಕ್ಷಣಕ್ಕೆ ಪ್ರತಿಯೊಬ್ಬರು ಆದ್ಯತೆ ನೀಡಬೇಕು. ಹೆಣ್ಣು–ಗಂಡು ಎಂಬ ಭೇಧ ಮಾಡದೇ ಹೆಣ್ಣು ಮಕ್ಕಳ ಶಿಕ್ಷಣಕ್ಕೆ ಒತ್ತು ನೀಡಬೇಕು. ಸರ್ಕಾರವು ಸಹ ಹಲವು ಯೋಜನೆಗಳನ್ನು ಜಾ–ರಿಗೊಳಿಸಿ ಹೆಣ್ಣು ಮಕ್ಕಳ ಶಿಕ್ಷಣಕ್ಕೆ ಒತ್ತು ನೀಡುತ್ತಿದೆ. ಮಕ್ಕಳ ಕಲ್ಯಾಣಕ್ಕಾಗಿ, ಹಕ್ಕಳ ಹಕ್ಕುಗಳ ರಕ್ಷಣೆಗಾಗಿ ವಿವಿಧ ಸಂಘ–ಸಂಸ್ಥೆಗಳು ಕಾರ್ಯನಿರ್ವಹಿಸುತ್ತಿವೆ ಎಂದು ಹೇಳಿದರು.

ಕಾನೂನಾತ್ಮಕ ದತ್ತು ಪ್ರಕ್ರಿಯೆ ಸಾರ್ವಜನಿಕರು ತಿಳಿದುಕೊಳ್ಳುವುದು ಅತ್ಯವಶ್ಯಕವಾಗಿದೆ. ಬಾಲ ನ್ಯಾಯ ಕಾಯ್ದೆ 2015 ಸೆಕ್ಷನ್ 81ರನ್ವಯ 5 ವರ್ಷಗಳವರೆಗೆ ಸೆರೆಮನೆ ವಾಸದೊಂದಿಗೆ ಒಂದು ಲಕ್ಷ ರೂ. ವರೆಗೆ ದಂಡ ವಿಧಿಸಬಹುದಾಗಿದೆ. ಈ ಅಪರಾಧದಲ್ಲಿ ಆಸ್ಪತ್ರೆಯವರು ಶಾಮೀಲಾಗಿದ್ದಲ್ಲಿ ಶಿಕ್ಷೆಯು ಅವಧಿ 3 ವರ್ಷಗಳಿಗೆ ಕಡಿಮೆ ಇಲ್ಲದಂತೆ 7 ವರ್ಷಗಳವರೆಗೆ ವಿಸ್ತರಣೆ ಮಾಡಬಹುದಾಗಿದ್ದು, ಕಾನೂನು ಬಾಹಿರವಾಗಿ ಮಕ್ಕಳನ್ನು ಸಾಕಿಕೊಳ್ಳುವುದು ಅಥವಾ ಮಾರಾಟ ಮಾಡುವುದು ಕಂಡು ಬಂದಲ್ಲಿ 1098 ಮಕ್ಕಳ ಸಹಾಯವಾಣಿಗೆ ಕರೆ ಮಾಡಿ ಮಾಹಿತಿ ಒದಗಿಸುವಂತೆ ಅವರು ಮನವಿ ಮಾಡಿಕೊಂಡರು.

ಈ ಸಂದರ್ಭದಲ್ಲಿ ಇಂಡಿಯಾ ವರ್ಲ್ಡ್ ರೆಕಾರ್ಡ್ ಪ್ರಶಸ್ತಿ ಪಡೆದ ಯಂಗ್ ಸೂಪರ್ ಟ್ಯಾಲೆಂಟೆಡ್ ಧಿತಿ ಹಣಮಂತ ಶಿರಶ್ಯಾಡ ಅವ–ರಿಗೆ ಸನ್ಮಾನಿಸಲಾಯಿತು. 2023ನೇ ಸಾಲಿನ ಜಿಲ್ಲಾ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಿಗೆ ಹಾಗೂ 2022–23ನೇ ಸಾಲಿನಲ್ಲಿ ಎಸ್.ಎಸ್.ಎಲ್.ಸಿ.ಯಲ್ಲಿ ಅತಿ ಹೆಚ್ಚು ಅಂಕ ಪಡೆದ ಬಾಲಮಂದಿರದ ವಿದ್ಯಾರ್ಥಿಗಳಿಗೆ ಸನ್ಮಾನಿಸಲಾಯಿತು. ಕ್ರೀಡಾ ಚಟುವಟಿ–ಕೆಯಲ್ಲಿ ಭಾಗವಹಿಸಿ ವಿಜೇತರಾದವರಿಗೆ ಪ್ರಶಸ್ತಿ ನೀಡಲಾಯಿತು.

ಕಾರ್ಯಕ್ರಮದಲ್ಲಿ ಕಾರ್ಮಿಕ ಅಧಿಕಾರಿ ಎಸ್.ಜಿ.ಖೈನೂರ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಾಯಕ ನಿರ್ದೇಶಕ ಅಮರೇಶ ದೊಡಮನಿ, ವಿಕಲಚೇತನರ ಅಧಿಕಾರಿ ರಾಜಶೇಖರ ಧೈವಾಡಿ, ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷ ಶ್ರೀಧರ ಕುಲಕರ್ಣಿ, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ರಕ್ಷಣಾಧಿಕಾರಿ ಬಸವರಾಜ ಜಗಳೂರ, ವಿಜಯಪುರ ಗ್ರಾಮೀಣ ಶಿಶು ಅಭಿವೃದ್ದಿ ಯೋಜನಾಧಿಕಾರಿ ಮ್ಯಾಗೇರಿ, ನಗರ ಶಿಶು ಅಭಿವೃದ್ದಿ ಯೋಜನಾಧಿಕಾರಿಗಳಾದ ದೀಪಾಕ್ಷಿ ಜಾನಕಿ, ಚಡಚಣ ಶಿಶು ಅಭಿವೃದ್ದಿ ಯೋಜನಾಧಿಕಾರಿ ಅನೀಲ, ಮುದ್ದೇಬಿಹಾಳ ಶಿಶು ಅಭಿವೃದ್ದಿ ಯೋಜನಾಧಿಕಾರಿ ಶಿವಮೂರ್ತಿ ಕುಂಬಾರ ಉಪಸ್ಥಿತರಿದ್ದರು.

# ಮಕ್ಕಳು ಉತ್ತಮ ಸಂಸ್ಕಾರ ಮೈಗೂಡಿಸಿಕೊಳ್ಳಬೇಕು :ಶೈಲಶ್ರೀ



ಉದಯರಶ್ಮಿ ನ್ಯೂಸ್

ಸಿಂದಗಿ: ಸಂಸ್ಕಾರಯುತ ಶಿಕ್ಷಣವು ತಾಯಿ ಬೇರಾಗಿದ್ದು, ಮಕ್ಕಳು ಉತ್ತಮ ಸಂಸ್ಕಾರವನ್ನು ಜೀವನದಲ್ಲಿ ಮೈಗೂಡಿಸಿಕೊಳ್ಳಬೇಕು ಎಂದು ಆರಕ್ಷಕಿ, ಸಾಹಿತಿ ಶೈಲಶ್ರೀ ನ್ಯಾಮಣ್ಣವರ ಹೇಳಿದರು.

ಪಟ್ಟಣದ ನಾಗೂರ ಬಡಾವಣೆಯಲ್ಲಿರುವ ಸಮಥ–ರ್ ವಿದ್ಯಾವಿಕಾಸ ಸಂಸ್ಥೆಯ ಅಂಗ ಸಂಸ್ಥೆಯಾದ ವಿದ್ಯಾನಿಕೇತನ ಪ್ರಾಥಮಿಕ ಶಾಲೆಯಲ್ಲಿ ಕನ್ನಡ ರಾಜ್ಯೋತ್ಸವ ಸುವರ್ಣ ಸಂಭ್ರಮದ ನಿಮಿತ್ಯವಾಗಿ ಹಮ್ಮಿಕೊಂಡ ಮಕ್ಕಳ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಶಿಕ್ಷಕರು ಮಕ್ಕಳಿಗೆ ಪ್ರೀತಿಯಿಂದ ಪಾಠ ಬೋಧಿಸುವ ಕಾರ್ಯದ ಜೊತೆಗೆ ಸ್ನೇಹ, ಪ್ರೀತಿ, ವಾತ್ಸಲ್ಯ ಮತ್ತು ಕರುಣೆಯನ್ನು ತೋರಿಸಿ ದೇಶದ ಉತ್ತಮ ಪ್ರಜೆಗಳನ್ನಾಗಿ ಮಾಡಬೇಕೆಂದರು.

ಈ ವೇಳೆ ಸಂಸ್ಥೆಯ ಅಧ್ಯಕ್ಷ ಆರ್.ಡಿ.ಕುಲಕರ್ಣಿ ಅಧ್ಯಕ್ಷತೆ ಸ್ಥಾನವನ್ನು ಅಲಂಕರಿಸಿ ಮಾತನಾಡಿದ ಅವರು, ಮಕ್ಕಳು ಸತತ ಅಧ್ಯಯನ ಮಾಡುವ ಮೂಲಕ ಹೆಚ್ಚು ಅಂಕಗಳನ್ನು ಪಡೆದುಕೊಂಡು ಜ್ಞಾನವಂತರಾಗಿ ಪಾಲಕರಿಗೆ ಮತ್ತು ವಿದ್ಯಾಸಂಸ್ಥೆಗೆ ಕೀರ್ತಿಯನ್ನು ತರಬೇಕೆಂದು ಸಲಹೆ ನೀಡಿದರು.

ಇದೇ ಸಂದರ್ಭದಲ್ಲಿ ಸಂಸ್ಥೆಯ ನಿರ್ದೇಶಕ ಪಿ.ಡಿ. ಕುಲಕರ್ಣಿ, ಮುಖ್ಯಗುರುಮಾತೆ ಎಮ್.ಪಿ. ಬುಕ್ಕಾ, ವ್ಹಿ.ಕೆ.ಚವ್ಹಾಣ ಸತೀಶ ಕುಲಕರ್ಣಿ, ರಾಜೇಶ್ವರಿ ಪಕೀರಪುರ ಸೇರಿದಂತೆ ಸಂಸ್ಥೆಯ ಆಡಳಿತ ಮಂಡಳಿ, ಶಾಲೆಯ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳು ಹಾಗು ವಿದ್ಯಾರ್ಥಿಗಳಿದ್ದರು.

# ಆಯಿಷಾ ಇಂಗಳಗೇರಿಗೆ ಸನ್ಮಾನ

ಉದಯರಶ್ಮಿ ನ್ಯೂಸ್



ಸಿಂದಗಿ: ಪೂಜ್ಯ ಶ್ರೀ ಚೆನ್ನವೀರಸ್ವಾಮಿ ಪ್ರತಿಷ್ಠಾನ ಸಾರಂಗಮಠ–ಗಚ್ಚಿನಮಠ ಶಿವಶರಣೆರ ಜೀವನ ಚರಿತಾಮೃತ ಪ್ರವಚನ ಕಾರ್ಯಕ್ರಮದಲ್ಲಿ ಜಿಲ್ಲಾ ಮಟ್ಟದ ಕರಾಟೆ ಮತ್ತು ಜುಡೋ ಸ್ಪರ್ಧೆಯಲ್ಲಿ ಭಾಗವಹಿಸಿ ಪ್ರಥಮ ಸ್ಥಾನ ಪಡೆದು ರಾಜ್ಯ ಮಟ್ಟಕ್ಕೆ ಆಯ್ಕೆಯಾದ ಪದ್ಮರಾಜ ಪ್ರಾಥಮಿಕ ಶಾಲೆಯ ಆಯಿಷಾ ಇಂಗಳಗೇರಿ ವಿದ್ಯಾರ್ಥಿಗೆ ಶ್ರೀಮಠದ ವತಿಯಿಂದ ಡಾ.ಪ್ರಭುಸಾರಂಗದೇವ ಶಿವಾಚಾರ್ಯರು ಸನ್ಮಾನಿಸಿ ಗೌರವಿಸಿದರು.

ವಿದ್ಯಾರ್ಥಿನಿಯು ಈ ಸಾಧನೆಗೆ ಮಾರ್ಗದರ್ಶನ ನೀಡಿದ ದೈಹಿಕ ಶಿಕ್ಷಕ ಶಿವಾನಂದ ಸಂಗಮ ಹಾಗೂ ವಿದ್ಯಾರ್ಥಿನಿಗೆ ಸಂಸ್ಥೆಯ ಅಧ್ಯಕ್ಷರಾದ ಡಾ.ಪ್ರಭುಸಾರಂಗದೇವ ಶಿವಾಚಾರ್ಯರು, ಆಡಳಿತ ಮಂಡಳಿ, ಮುಖ್ಯಗುರು ಎಸ್.ಎಮ್. ಬಿರಾದಾರ ಸೇರಿದಂತೆ ಶಾಲೆಯ ಶಿಕ್ಷಕರು ಅಭಿನಂದನೆ ಸಲ್ಲಿಸಿದ್ದಾರೆ.

# ನಮ್ಮ ನೆಲದ ಗುರುತುಗಳನ್ನು ನಾವೇ ಮುನ್ನಲೆಗೆ ತರಬೇಕು :ಕಡಕೋಳ

ಉದಯರಶ್ಮಿ ನ್ಯೂಸ್



ಸಿಂದಗಿ: ಕೋರವಾರ ಹಾಗೂ ಹಂದಿಗನೂರ ರಂಗಭೂಮಿ, ತತ್ವಪದದ ಅನುಭಾವದ ತವರೂರು ಇದ್ದ ಹಾಗೆ. ಇಲ್ಲಿ ರಂಗಭೂಮಿಗೆ ನೀಡಿದ ಕೊಡುಗೆ ಅನನ್ಯವಾಗಿದೆ ಎಂದು ವಿದ್ವಾಂಸ ಮಲ್ಲಿಕಾರ್ಜುನ ಕಡಕೋಳ ಹೇಳಿದರು.

ತಾಲೂಕಿನ ಪುರದಾಳ ಗ್ರಾಮದ ಬ್ರಹ್ಮಜ್ಞಾನಿ ಶ್ರೀ ಭೀಮಾಶಂಕರ ಮಹಾರಾಜರ 39ನೇ ಜಾತ್ರಾ ಮಹೋತ್ಸವ ತನ್ನಿಮಿತ್ತ ಸಾವಿರ ಹಾಡುಗಳ ಸಂತ, ತತ್ವಪದಕಾರ, ಶ್ರೀ ಯಮನೂರೇಶ ಶರಣ–ರ ಹಾಗೂ ಶರಣೆ ಮಾತೋಶ್ರೀ ಲಿಂ. ಪಾರ್ವತಮ್ಮಗೌಡತಿ ಯ. ಬಿರಾದಾರ ರವರ 3ನೆಯ ಪುಣ್ಯ ಸ್ಮರಣೋತ್ಸವ ನಿಮಿತ್ತ ಅನುಭಾವ ಕವಿಗೋಷ್ಠಿ ಹಾಗೂ ಸಾಧಕರಿಗೆ ಸನ್ಮಾನ ಸಮಾರಂಭದಲ್ಲಿ ಮಾತನಾಡಿದ ಅವರು, ತತ್ವಪದ ಪರಂಪರೆ ಶಿಷ್ಟ ಭಾಷೆಯಿಂದ ದೂರವಾಗಿತ್ತು. ಇತ್ತೀಚಿಗೆ ಈ ಕುರಿತು ಅಮೋಘವಾದ ಸಂಶೋಧನೆಗಳು ಜರುಗುತ್ತಿರುವುದು ಹೆಮ್ಮೆಯ ವಿಷಯವಾಗಿದೆ. ನಮ್ಮ ನೆಲದ ಗುರುತುಗಳನ್ನು ನಾವೇ ಮುನ್ನಲೆಗೆ ತರಬೇಕು. ಎಲೆ ಮ–ರಿಯ ಕಾಯಿಯಂತಿರುವ ಬೋರಗಿ ಪುರದಾಳದ ತತ್ವಪದಕಾರರ ಕು–ರಿತು ಸಂಶೋಧನೆಗಳು ನಡೆಯಲಿ, ನಾಡಿಗೆ ಈ ಗುರು–ಶಿಷ್ಯ ಪರಂಪರೆಯ ತತ್ವಪದಗಳು ಜನರ ನಾಲಿಗೆಯ ಮೇಲೆ ನೆಲಿದಾಡುವಂತಾಗಲಿ ಎಂದರು.

ಈ ವೇಳೆ ಸಾಂಸ್ಕೃತಿಕ ಚಿಂತಕ ಅಬ್ದುಲ್ ರಹಿಮಾನ್ ಬಿದರಕುಂದಿ ಮಾತನಾಡಿ ಶರಣಶ್ರೀ ಯಮನೂರೇಶ ಮತ್ತು ಶರಣೆ ಪಾರ್ವತಮ್ಮಗೌಡತಿ ಅವರು ಸದಾ ದಾನ ಧರ್ಮ ಪರೋಪಕಾರ ಹಾಗೂ ಭಜನೆ, ಪ್ರವಚನ ಮುಂತಾದ ಕ್ಷೇತ್ರಗಳಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡು ಆಧ್ಯಾತ್ಮದ ಮೇರು ಪರ್ವತವಾಗಿದ್ದರು ಎಂದರು.

ಈ ವೇಳೆ ಕಾರ್ಯಕ್ರಮ ಉದ್ಘಾಟಿಸಿದ ಜಾನಪದ ವಿದ್ವಾಂಸ ಡಾ. ಎಂ.ಎಂ ಪಡಶೆಟ್ಟಿ ಮಾತನಾಡಿದರು.

ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ, ಮಕ್ಕಳ ಸಾಹಿತಿ ಪ.ಗು. ಸಿದ್ದಾಪುರ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ದಿವ್ಯಸಾನಿಧ್ಯ ವಹಿಸಿದ ಬೋರಗಿ–ಪುರದಾಳ ಶ್ರೀ ವಿಶ್ವಾರಾಧ್ಯಮಠದ ಪ.ಪೂ.ತಪೋರತ್ನಂ ಮಹಾಲಿಂಗೇಶ್ವರ ಮಹಾಸ್ವಾಮಿಗಳು ಆಶೀರ್ವಚನ ನೀಡಿದರು.

ಕಾರ್ಯಕ್ರಮದಲ್ಲಿ ಕೋರವಾರ ಚೌಕಿಮಠದ ಶ್ರೀ ಮುರುಗೇಂದ್ರ ಮಹಾಸ್ವಾಮಿಗಳು ಸಮ್ಮುಖ ವಹಿಸಿದ್ದರು.

ಕಾನಿಪ ಅಧ್ಯಕ್ಷ ಆನಂದ ಶಾಬಾದಿ, ಮನು ಪತ್ತಾರ, ಬಸವರಾಜ ಬಡಿಗೇರ ಬೋರಗಿ, ಅಬ್ದುಲ್ ರಹಮಾನ್, ಶ್ರೀಮತಿ ದೀಪಾ ಲಗಳಿ, ತಿಳಗೂಳ, ಭೀಮಬಾಯಿ ಗೌಡತಿ, ಭೀಮನಗೌಡ ಬಿರಾದಾರ, ಇಮಾಂಬಿ ದೊಡಮನಿ, ಕಬೂಲ ಕೊಕಟನೂರ, ಎಸ್.ಎಸ್. ಸಾತಿಹಾಳ, ಮೌಲಾಲಿ ಆಲಗೂರ, ಈರನಗೌಡ ಬಿರಾದಾರ ಹಂದಿಗನೂರ ಸೇರಿದಂತೆ ಅನೇಕರಿದ್ದರು. ಸಾಹಿತಿ ಸಾಹೇಬಗೌಡ ಬಿರಾದಾರ ಪ್ರಾಸ್ತಾವಿಕವಾಗಿ ಮಾತನಾಡಿ, ನಿರೂಪಿಸಿ ವಂದಿಸಿದರು.

# ಡಿ.3 ರಂದು ವಿಶ್ವ ವಿಕಲಚೇತನರ ದಿನಾಚರಣೆ

ಉದಯರಶ್ಮಿ ನ್ಯೂಸ್

ವಿಜಯಪುರ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ ಇಲಾಖೆ, ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ವಿಕಲಚೇತನರ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಜಿಲ್ಲೆಯ ಎಲ್ಲ ಸಂಘ–ಸಂಸ್ಥೆಗಳ ಸಹಯೋಗದಲ್ಲಿ ಡಿ.3 ರಂದು ನಗರದ ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರದಲ್ಲಿ ವಿಶ್ವ ವಿಕಲಚೇತನರ ದಿನಾಚರಣೆ ಹಮ್ಮಿಕೊಳ್ಳಲಾಗಿದೆ.

ಅಂದು ಬೆಳಿಗ್ಗೆ ಶ್ರೀ ಸಿದ್ದೇಶ್ವರ ದೇವಸ್ಥಾನದಿಂದ ವಿಶ್ವ ವಿಕಲಚೇತನರ ದಿನಾಚರಣೆ ಅಂಗವಾಗಿ ತ್ರಿಚಕ್ರ ವಾಹನಗಳ ಜಾಥಾ ಕಾರ್ಯಕ್ರಮ ನಡೆಯಲಿದ್ದು, ಬೆಳಿಗ್ಗೆ 10 ಗಂಟೆಗೆ ನಗರದ ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರದಲ್ಲಿ ನಡೆಯುವ ದಿನಾಚರಣೆ ಕಾರ್ಯಕ್ರಮವನ್ನು ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ದಿ ಖಾತೆ ಸಚಿವರಾದ ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಂ.ಬಿ.ಪಾಟೀಲ ಉದ್ಘಾಟಿಸಲಿದ್ದಾರೆ. ವಿಜಯಪುರ ನಗರ ಶಾಸಕರಾದ ಬಸನಗೌಡ ಆರ್.ಪಾಟೀಲ(ಯತ್ನಾಳ) ಅಧ್ಯಕ್ಷತೆ ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಜವಳಿ ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರಾದ ಶಿವಾನಂದ ಪಾಟೀಲ, ಕರ್ನಾಟಕ ಸರ್ಕಾರದ ನವದೆಹಲಿ ವಿಶೇಷ ಪ್ರತಿನಿಧಿ–2 ಪ್ರಕಾಶ ಹುಕ್ಕೇರಿ, ಸಂಸದ ರಮೇಶ ಜಿಗಜಿಣಗಿ, ಶಾಸಕರುಗಳಾದ ಯಶವಂತರಾಯಗೌಡ ಪಾಟೀಲ, ಹಣಮಂತ ನಿರಾಣಿ, ಪ್ರಕಾಶ ರಾಠೋಡ, ಸುನೀಲಗೌಡ ಬಿ.ಪಾಟೀಲ, ಪಿ.ಎಚ್.ಪೂಜಾರ, ಅಪ್ಪಾಜಿ ಸಿ.ಎಸ್.ನಾಡಗೌಡ, ವಿಠ್ಠಲ ಕಟಕದೊಂಡ, ಭೀಮನಗೌಡ(ರಾಜುಗೌಡ) ಬಸನಗೌಡ ಪಾಟೀಲ, ಅಶೋಕ ಮಲ್ಲಪ್ಪ ಮನಗೂಳಿ ಸೇರಿದಂತೆ ವಿವಿಧ ಜನಪ್ರತಿನಿಧಿಗಳು, ಅಧಿಕಾ–ರಿಗಳು ಭಾಗವಹಿಸಲಿದ್ದಾರೆ.

ಕನ್ನಡ ಮತ್ತ ಸಂಸ್ಕೃತಿ ಇಲಾಖೆಯಿಂದ ಕರ್ನಾಟಕ ಸಂಭ್ರಮ–50 ಅಂಗವಾಗಿ ಯುವ ಸೌರಭ ಸಾಂಸ್ಕೃತಿಕ ಕಾರ್ಯಕ್ರಮ

# ಮೂಲ ಜಾನಪದ ಕಲೆಗಳನ್ನು ಪ್ರೋತ್ಸಾಹಿಸಿ :ನಾಟೀಕಾರ

ಉದಯರಶ್ಮಿ ನ್ಯೂಸ್



ವಿಜಯಪುರ: ನಮ್ಮ ದೇಶವು ಭವ್ಯ ಪರಂಪರೆ ಇತಿಹಾಸ ಹೊಂದಿದ ದೇಶವಾಗಿದೆ. ಜಗತ್ಪಸಿದ್ಧಿಯಾದ ನಮ್ಮ ಸಂಸ್ಕೃತಿ, ಕಲೆ, ಸಾಹಿತ್ಯ, ಜಾನಪದ ಕಲೆಗಳನ್ನು ಪ್ರೋತ್ಸಾಹಿಸಬೇಕು ಎಂದು ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜು ಪ್ರಾಚಾರ್ಯರಾದ ಸಿ.ಬಿ ನಾಟೀಕಾರ ಹೇಳಿದರು.

ಇಂದು ನಗರದ ಬಾಲಕೀಯರ ಸರ್ಕಾರಿ ಪದವ ಪೂರ್ವ ಕಾಲೇಜಿನಲ್ಲಿ ಕನ್ನಡ ಮತ್ತ ಸಂಸ್ಕೃತಿ ಇಲಾಖೆಯ ವತಿಯಿಂದ ಕರ್ನಾಟಕ ಸಂಭ್ರಮ–50 ಅಂಗವಾಗಿ ಯುವ ಸೌರಭ ಸಾಂಸ್ಕೃತಿಕ ಕಾರ್ಯಕ್ರಮವನ್ನು ಡೊಳ್ಳು ಬಾರಿಸುವ ಮೂಲಕ ಚಾಲನೆ ನೀಡಿ ಅವರು ಮಾತನಾಡಿದ ಅವರು, ಜನಪದರು ತಮ್ಮ ದೈನಂದಿನ ಬದುಕಿನಲ್ಲಿ ಜಾನಪದ ಸೊಗಡನ್ನು ಮೈಗೂಡಿಸಿಕೊಂಡಿದ್ದು, ಅವುಗಳಲ್ಲಿ ಪ್ರಮುಖವಾಗಿ ಲಾವಣಿ, ಹಂತಿ ಪದ, ಸಂಪ್ರದಾಯ ಪದ ಸೇರಿದಂತೆ ಅನೇಕ ಜಾನಪದ ಕಲೆಗಳೊಂದಿಗೆ ಸ್ವಚ್ಛಂದದ ಬದುಕನ್ನು ರೂಪಿಸಿಕೊಂಡಿದ್ದಾರೆ. ನಮ್ಮ ಜನಪದರ ಇಂತಹ ಗ್ರಾಮೀಣ ಸೊಗಡಿನ ಜಾನಪದ ಕಲೆಗಳನ್ನು ಇಂದಿನ ಯುವ ಜನತೆ ಉಳಿಸಿ ಬೆಳೆಸಿಕೊಂಡು ಹೋಗಬೇಕಾದ ಗುರುತರ ಹಿರಿಯ ಜವಾಬ್ದಾರಿಯಾಗಿದೆ ಎಂದು ಹೇಳಿದರು.

ಸಾಂಸ್ಕೃತಿಕ ನೆಲಗಟ್ಟಿನ ಬೆಸುಗೆ ಬೆಸೆಯುವ ಅತ್ಯಮೂಲ್ಯವಾದ ಕಲೆಗಳನ್ನು ಪ್ರೋತ್ಸಾಹಿಸುವುದರೊಂದಿಗೆ ಉಳಿಸಿಕೊಳ್ಳಬೇಕು ನಶಿಸಿ ಹೋಗುತ್ತಿರುವ ಕಲೆಗಳನ್ನು ಮುಂದಿನ ಯುವ ಪೀಳಿಗೆಗೆ ಕೊಂಡೊಯ್ಯಬೇಕು ಯುವ ಜನತೆಯಲ್ಲಿನ ಸೃಜನಾತ್ಮಕ ಕಲೆಗಳ ಪ್ರಸ್ತುತಪಡಿಸಲು ಯುವ ಪ್ರತಿಭೆಗಳನ್ನು ಪ್ರೋತ್ಸಾಹಿಸಲು ಇಂತಹ ವೇದಿಕೆ ಕಲ್ಪಿಸಿಕೊಡಬೇಕು ಎಂದು ಅವರು ಹೇಳಿದರು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ ನಾಟಕಕಾರರಾದ ಡಿ.ಎಚ್ ಕೊಲ್ಹಾರ ಮಾತನಾಡಿ, ಇಂದಿನ ಯುವಕರು ತಾಂತ್ರಿಕತೆಯೊಂದಿಗೆ ಯುವಕರು ನಮ್ಮ ಕಲೆ, ಸಂಸ್ಕೃತಿ ಹಾಗೂ ಪಂರಪರೆ ಉಳಿಯುವಿಕೆಗೆ ಇಂತಹ ಕಾರ್ಯಕ್ರಮ ಕಾರ್ಯಕ್ರಮಗಳನ್ನು ಆಯೋಜಿಸಿ, ಜಾಗೃತಿ ಮೂಡಿಸಬೇಕು. ನಮ್ಮ ಪೂರ್ವಜರು ಕಲೆ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ಹೆಚ್ಚು ಪ್ರೋತ್ಸಾಹ ನೀಡುತ್ತಿದ್ದರು ಈಗಲೂ ಅದು ಮುಂದುವರೆಯಬೇಕು ಎಂದು ಅವರು ಹೇಳಿದರು.

ಕಾರ್ಯಕ್ರಮದ ಮುಂಚೆ ಗಾಂಧೀ ವೃತ್ತದಿಂದ ಬಾಲಕಿಂ–ಯರ ಸರ್ಕಾರಿ ಪದವಿ ಪೂರ್ವ ಕಾಲೇಜ್‌ವರೆಗೆ ಗೊಂಬೆ ಹಾಗೂ ಡೊಳ್ಳು ಕುಣಿತದೊಂದಿಗೆ ಭವ್ಯ ಮೆರವಣಿಗೆ ಆಯೋಜಿಸಲಾಗಿತ್ತು. ಕಾರ್ಯಕ್ರಮದಲ್ಲಿ ಕುಮಾರಿ ರಕ್ಷಂದ ತಿಳಗೊಳ ಅವರಿಂದ ಸುಗಮ ಸಂಗೀತ, ಕುಮಾರಿ ದಿವ್ಯಾ ಭಿಸೆ ಮತ್ತು ದೀಕ್ಷಾ ಭಿಸೆ ಸಮೂಹ ನೃತ್ಯ, ವಿನೋದ ಕಟಗೇರಿ ಜಾನಪದ ಗೀತೆ, ಕುಮಾರಿ ಶುಭನಂ ದಂದರಗಿ ಮತ್ತು ಸಂಗಡಿಗ–ರಿಂದ ಕರುಳಿನ ಕೂಗು ನಾಟಕ, ಬಬಲೇಶ್ವರದ ರಾಕೇಶ ಮಾಳಪ್ಪಗೋಳ ಹಾಗೂ ಸಂಗಡಿಗರಿಂದ ಗೊಂಬೆ ಕುಣಿತ ಹಾಗೂ ಬಬಲೇಶ್ವರದ ಕಾಶಿಲಿಂಗ ಲೋಕೂರಿ ಅವರಿಂದ ಡೊಳ್ಳು ಕುಣಿತ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಯಿತು.

ವೇದಿಕೆ ಮೇಲೆ ಉಪನ್ಯಾಸಕಾದ ಎಸ್. ಲೇಸನ್ನವರ, ಮೇತ್ರಿ ಕಲಾವಿದರಾದ ವೀರೇಶ ವಾಲಿ, ಕಾಲಜಿನ ಉಪನ್ಯಾಸಕರು, ವಿದ್ಯಾರ್ಥಿಗಳು ಹಾಗೂ ಇತರರು ಉಪಸ್ಥತರಿದ್ದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರದ ಬಿ. ನಾಗರಾಜ ಸ್ವಾಗತಿಸಿ ವಂದಿಸಿದರು.

## ಸಂವಿಧಾನ ದಿನಾಚರಣೆ ಕಾರ್ಯಕ್ರಮದಲ್ಲಿ ನ್ಯಾಯಾಧೀಶ ಸಂಪತ್ತಕುಮಾರ ಬಳೂಳಗಿಡದ ಅಭಿಮತ

# ಸಂವಿಧಾನದ ಆಶಯದಂತೆ ನಡೆದುಕೊಂಡರೆ ಸಮಾನತೆ ಸಾಧ್ಯ

**ಉದಯರಶ್ಮಿ ನ್ಯೂಸ್**

ಮುದ್ದೇಬಿಹಾಳ: ಸಂವಿಧಾನ ದಿನಾಚರಣೆಯ ದಿನದಂದು ಮಾತ್ರ ಡಾ.ಬಿ.ಆರ್.ಅಂಬೇಡ್ಕರ್ ಅವರಿಗೆ ಮತ್ತು ಸಂವಿಧಾನಕ್ಕೆ ಗೌರವಿಸದೇ, ಪ್ರತಿಯೊಬ್ಬ ಭಾರತೀಯ ತಮ್ಮ ಆತ್ಮದಲ್ಲಿ ಉಸಿರು ಇರುವವರೆಗೂ ಸಂವಿಧಾನದ ಆಶಯುಗಳಿಗೆ ವಿರುದ್ಧವಾಗಿ ನಡೆದುಕೊಳ್ಳಬಾರದು. ಅಂದಾಗ ಮಾತ್ರ ನಮ್ಮ ದೇಶದಲ್ಲಿ ಜಾತಿ ವ್ಯವಸ್ಥೆ ಸಂಪೂರ್ಣವಾಗಿ ನಿರ್ಮೂಲನೆಯಾಗಿ ಸಮಾನತೆ ಕಾಣಲು ಸಾಧ್ಯ ಎಂದು ಕಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶ ಸಂಪತ್ತಕುಮಾರ ಬಳೂಳಗಿಡದ ಹೇಳಿದರು.




ಪಟ್ಟಣದ ನ್ಯಾಯಾಲಯದ ಆವರಣದಲ್ಲಿ ತಾಲೂಕು ಕಾನೂನು ಸೇವಾ ಸಮಿತಿ, ನ್ಯಾಯವಾದಿಗಳ ಸಂಘ ಹಾಗೂ ಇತರ ಎಲ್ಲ ಸರಕಾರಿ ಇಲಾಖೆಗಳ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ ಸಂವಿಧಾನ ದಿನಾಚರಣೆ ಕಾರ್ಯಕ್ರಮದಲ್ಲಿ ಪ್ರತಿಜ್ಞಾವಿಧಿ ಬೋಧಿಸಿ ಅವರು ಮಾತನಾಡಿದರು.

ಸ್ವತಂತ್ರಪೂರ್ವ ಭಾರತದಲ್ಲಿ ಜಾತೀಯುತೆ, ಅಸ್ಪೃಶ್ಯತೆ ತಾಂಡವವಾಡುತ್ತಿತ್ತು. ಸಂವಿಧಾನ ಸಮರ್ಪಣೆಯಾದ ನಂತರ ಕ್ರಮೇಣ ಕಡಿಮೆಯಾಗುತ್ತಾ ಬಂದಿದೆ. ಸಂವಿದಾನವನ್ನು ಪ್ರತಿಯೊಬ್ಬ ಜಾತಿ ಜನಾಂಗದವರೂ ಅಪ್ಪಿಕೊಳ್ಳುವಂಥದ್ದು. ಬಾರತದ ಪ್ರತಿಯೊಬ್ಬ ಪ್ರಜೆಯೂ ದೇಶಾಭಿಮಾನ, ಸೈನಿಕಾಭಿಮಾನ ಮತ್ತು ಸಂವಿಧಾನಾಭಿಮಾನವನ್ನು ಬೆಳೆಸಿಕೊಳ್ಳಬೇಕು ಎಂದರು.

ನ್ಯಾಯವಾದಿಗಳ ಸಂಘದ ಅಧ್ಯಕ್ಷ ಎಸ್.ಎಸ್.ವಾಲಗತ್ತಿ ಮತ್ತು ಹಿರಿಯ ನ್ಯಾಯವಾದಿ ಎಂ.ಎಚ್.ಹಾಲಣ್ಣವವರ ಮಾತನಾಡಿ, ಸಂವಿಧಾನ ಕೇವಲ ನ್ಯಾಯಾಂಗ ಇಲಾಖೆಗೆ ಮತ್ತು ನ್ಯಾಯವಾದಿಗಳಿಗೆ ಸೀಮಿತವಾದದ್ದಲ್ಲ. ಪ್ರತಿಯೊಬ್ಬ ಪ್ರಜೆಗೂ ಸಂಬಂಧಿಸಿದ್ದಾಗಿದೆ. ಅದಕ್ಕೆ ಚ್ಯುತಿ ಬಂದಾಗ ಪ್ರತಿಯೊಬ್ಬರೂ ಪ್ರತಿಭಟಿಸಬೇಕು ಎಂದರು.

ವಿಶೇಶ ಉಪನ್ಯಾಸ ನೀಡದ ಎನ್.ಆರ್.ಮೊಕಾಶಿ ವಕೀಲರು ಜಾತಿ ಎಂಬ ಕನ್ನಡಕ ಕಳಚಿದಾಗ ಮಾತ್ರ ಅಂಬೇಡ್ಕರ್ ಅವರ ಸಾಧನೆಯ ಬಗ್ಗೆ ಅರ್ಥೈಸಿಕೊಳ್ಳಲು ಸಾಧ್ಯ ಎಂದರು.

ಕಾರ್ಯಕ್ರಮದಲ್ಲಿ ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ನ್ಯಾಯಾಧೀಶ ಬಳೂಲಗಿಡದರು ಭಕ್ತಿಯಿಂದ ಪೂಜಿಸಿದರು.

ಸಹಾಯಕ ಸರ್ಕಾರಿ ಅಭಿಯೋಜಕ ಬಸವರಾಜ ಆಹೇರಿ, ಅಪರ ಸರ್ಕಾರಿ ವಕೀಲ ಎಚ್.ಎಲ್.ಸರೂರ, ಹಿರಿಯ ನ್ಯಾಯವಾದಿಗಳಾದ ಜೆ.ಚಿನಿವಾರ, ಆರ್.ಬಿ.ಪಾಟೀಲ, ಬಿ.ಆರ್.ನಾಡಗೌಡರ, ನ್ಯಾ.ಸಂಘದ ಉಪಾಧ್ಯಕ್ಷ ಎಚ್.ಜಿ.ನಾಗೋಡ ಸೇ-ರಿದಂತೆ ನ್ಯಾಯಾಲಯದ ಸಿಬ್ಬಂದಿ ಭಾಗಿಯಾಗಿದ್ದರು.

ಸಂಘದ ಪ್ರ.ಕಾರ್ಯದರ್ಶಿ ಪಿ.ಬಿ.ಗೌಡರ ಕಾರ್ಯಕ್ರಮ ನಿರ್ವಹಿಸಿದರು.

# ನ.30ರಂದು ಭಕ್ತ ಕನಕದಾಸ ಜಯಂತಿ

**ಉದಯರಶ್ಮಿ ನ್ಯೂಸ್**

ವಿಜಯಪುರ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಆಶ್ರಯದಲ್ಲಿ ನವೆಂಬರ್ 30 ರಂದು ಸಂತ ಶ್ರೇಷ್ಠ ಭಕ್ತ ಕನಕದಾಸ ಜಯಂತಿ ಕಾರ್ಯಕ್ರಮ ನಗರದ ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರದಲ್ಲಿ ಹಮ್ಮಿಕೊಳ್ಳಲಾಗಿದೆ.


ಜಯಂತಿ ಕಾರ್ಯಕ್ರಮದ ಅಂಗವಾಗಿ ಅಂ-ದು ಬೆಳಿಗ್ಗೆ 9-30ಕ್ಕೆ ನಗರದ ಶ್ರೀ ಸಿದ್ದೇಶ್ವರ ದೇವಸ್ಥಾನದಿಂದ ಮೆರವಣಿಗೆ ಹಾಗೂ ಬೆಳಿಗ್ಗೆ 10 ಗಂಟೆಗೆ ನಡೆಯುವ ಜಯಂತಿ ಕಾರ್ಯಕ್ರಮವನ್ನು ಬ್ರಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಖಾತೆ ಸಚಿವರಾದ ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಬಿ.ಪಾಟೀಲ ಉದ್ಘಾಟಿಸಲಿದ್ದಾರೆ. ವಿಜಯಪುರ ನಗರ ಶಾಸಕರಾದ ಬಸನಗೌಡ ಆರ್.ಪಾಟೀಲ(ಯತ್ನಾಳ) ಅಧ್ಯಕ್ಷತೆ ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಜವಳಿ ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರಾದ ಶಿವಾನಂದ ಪಾಟೀಲ, ಕರ್ನಾಟಕ ಸರ್ಕಾರದ ನವದೆಹಲಿ ವಿಶೇಷ ಪ್ರತಿನಿಧಿ-2 ಪ್ರಕಾಶ ಹುಕ್ಕೇರಿ, ಸಂಸದ ರಮೇಶ ಜಿಗಜಿಣಗಿ, ಶಾಸಕರುಗಳಾದ ಯಶವಂತರಾಯಗೌಡ ಪಾಟೀಲ, ಹಣಮಂತ ನಿರಾಣಿ, ಪ್ರಕಾಶ ರಾಠೋಡ, ಸುನೀಲಗೌಡ ಬಿ.ಪಾಟೀಲ, ಪಿ.ಎಚ್.ಪೂಜಾರ, ಅಪ್ಪಾಜಿ ಸಿ.ಎಸ್.ನಾಡಗೌಡ, ವಿಠ್ಠಲ ಕಟಕದೊಂಡ, ಭೀಮನಗೌಡ(ರಾಜುಗೌಡ) ಬಸನಗೌಡ ಪಾಟೀಲ, ಅಶೋಕ ಮಲ್ಲಪ್ಪ ಮನಗೂಳಿ ಸೇರಿದಂತೆ ವಿವಿಧ ಜನಪ್ರತಿನಿಧಿಗಳು, ಅಧಿಕಾರಿಗಳು ಭಾಗವಹಿಸಲಿದ್ದಾರೆ.

ನ್ಯಾಯವಾದಿ ಹಾಗೂ ಸಾಹಿತಿಗಳಾದ ಶ್ರೀಮತಿ ವಿದ್ಯಾವತಿ ಅಂಕಲಗಿ ವಿಶೇಷ ಉಪನ್ಯಾಸ ನೀಡಲಿದ್ದಾರೆ. ಶ್ರೀಮತಿ ಗೀತಾ ಕುಲಕರ್ಣಿ ಭಕ್ತಿ ಸಂಗೀತ, ಪ್ರೊ: ಎ.ಎಚ್.ಕೊಳಮಲಿ, ಭೀರಪ್ಪ ಜುಮನಾಳ ಹಾಗೂ ಲಾಯಪ್ಪ ಇಂಗಳೆ ಅವ-ರಿಂದ ಕವನ ಕಾವ್ಯ ವಾಚನ ನಡೆಯಲಿದೆ.

## ಕಾವ್ಯರಶ್ಮಿ

– ವೀಣಾ ರಮೇಶ್
("ನಮ್ಮ ಕಥಾ ಅರಮನೆ" ಬರಹಗಾರರು)



### ಪಾತರಗಿತ್ತಿ.. ಚಿಟ್ಟೆ

ಆಹಾ!ಎಂತಹ ಸೌಂದರ್ಯದ
ಖನಿ ನೀನು
ಏನೆಂದು ಬಣ್ಣಿಸಲಿ ನಿನ್ನಂದವ ನಾನು

ಬಣ್ಣದ ಚಿತ್ತಾರವ ನಿನಗಿಟ್ಟವರು
ಯಾರೋ
ರಂಗಿನ ವರ್ಣವನು ತುಂಬಿದವರು ಯಾರೋ

ಅಲ್ಲಿಂದಿಲ್ಲಿಗೆ ಹಾರುವೆ ಮೋಡಿ ಮಾಡುತ
ಮಕ್ಕಳ ಹೃದಯಕ್ಕೆ ನೀನು ಲಗ್ಗೆ ಹಾಕುತ

ಹೂವಿಂದ ಹೂವಿಗೆ ಹಾರುವೆಯಲ್ಲ ನೀನು
ನಿನ್ನ ಹಿಡಿಯಲು ಸೋತು ಹೋದೆ ನಾನು

ಪಾತರಗಿತ್ತಿ ಎಂದು ಕರೆಯುವರು ನಿನ್ನನ್ನ
ಏನು ಮೋಡಿ ಮಾಡಿರುವೆಯೋ ಜನರನ್ನ

ದೇಹ ಚಿಕ್ಕದಾದರೇನು ಕೀರ್ತಿ ದೊಡ್ಡದು
ಸ್ವಾವಲಂಬಿ ಆಗಿ ಬದುಕುವ ಛಲ ನಿನ್ನದು



# ಅಪ್ಪ ಎಂಬ ಆಪ್ತರಕ್ಷಕ

ಅದೊಂದು ಮಧ್ಯಮ ವರ್ಗದ, ತಂದೆ-ತಾಯಿ, ಎರಡು ಗಂಡು ಒಂದು ಹೆಣ್ಣು ಮಗು ಇರುವ ಪುಟ್ಟ ಸಂಸಾರ. ಇಬ್ಬರು ಗಂಡು ಮಕ್ಕಳಿಗಿಂತ ತಂದೆಗೆ ಹೆಣ್ಣುಮಗಳ ಮೇಲೆ ಅಪಾರ ಪ್ರೀತಿ. ಹೈಸ್ಕೂಲಿಗೆ ಬಂದ ಗಂಡು ಮಕ್ಕಳು ಪರಸ್ಪರ ಜಗಳ ಮಾಡುತ್ತಿರುವಾಗ ತಂದೆ ಮಕ್ಕಳನ್ನು ಸಮಾಧಾನಪಡಿಸಿದರು. ಇಬ್ಬರೂ ಮಕ್ಕಳು ಅವನು ಮುದ್ದಿನ ಮಗ ಅದಕ್ಕೆ ಅವನಿಗೆ ನೀವು ಏನೂ ಹೇಳುವುದಿಲ್ಲ ಎಂದು ಪರಸ್ಪರ ದೋಷಾರೋಪಣೆ ಹೊರಿಸಿದರು. ಉತ್ತರವಾಗಿ ತಂದೆ ಅತ್ಯಂತ ಸಮಾಧಾನದಿಂದ ನೀವಿಬ್ಬರೂ ನನ್ನೆರಡು ಕಣ್ಣುಗಳಿದ್ದಂತೆ ಎಂದು ಹೇಳಿದರು. ಹಾಗಾದರೆ ನಾನು?? ಎಂದು ಅಲ್ಲಿಯೇ ಜಗಳ ನೋಡುತ್ತಿದ್ದ ಪುಟ್ಟ ಮಗಳು ಅಸುರಕ್ಷತಾ ಭಾವದಿಂದ ಕೇಳಿದಳು. ಕೂಡಲೇ ಎಚ್ಚೆತ್ತ ತಂದೆ ನೀನು ನನ್ನ ಹೃದಯ ಮಗು, ನಿನಗೆ ನೋವಾದರೆ ನನಗೂ ನೋವಾಗುತ್ತದೆ ಎಂದು ಹೇಳಿದರು. ಅದೇ ಕೊನೆ ಆ ಅಣ್ಣ ತಮ್ಮಂದಿರು ಎಂದೂ ತಮ್ಮ ತಂಗಿಯೊಂದಿಗೆ ಕಿತ್ತಾಡುವುದಾಗಲಿ ಕಿರಿಕಿರಿ ಮಾಡುವುದಾಗಲಿ ಮಾಡಲಿಲ್ಲ. ಆಕೆಯನ್ನು ಮಗುವಿನಂತೆ ಪೊರೆದರು. ಇಂದು ಅವರಿಲ್ಲದಿದ್ದರೂ ತಂದೆಯ ಎಲ್ಲಾ ಆದರ್ಶಗಳನ್ನು ಮೈಗೂಡಿಸಿಕೊಂಡು ಆ ಮಕ್ಕಳು ಪರಸ್ಪರ ಹೊಂದಾಣಿಕೆಯಿಂದ ಜೀವಿಸುತ್ತಿದ್ದಾರೆ. ಇದು ಮಕ್ಕಳಿಗೆ ಅಪ್ಪ ಕೊಡುವ ಭಾವನಾತ್ಮಕ ಮತ್ತು ನೈತಿಕ ತಾಕತ್ತು.




ನೂರಾರು ಕಿಲೋಮೀಟರ್ಗಳ ದೂರ ತನ್ನ ಬೈಕ್ ನಲ್ಲಿ ಪಯಣಿಸುತ್ತಿದ್ದ ಆ ತಂದೆ ನಿವೃತ್ತರಾದ ನಂತರ ವಯೋಸಹಜವಾಗಿ ಬೆಂಗಳೂರಿನ ಟ್ರಾಫಿಕ್ ನಲ್ಲಿ ಗಾಡಿ ಓಡಿಸಲು ಮಾತ್ರವಲ್ಲ ಹಿಂದೆ ಕುಳಿತುಕೊಳ್ಳಲು ಕೂಡ ಭಯ ಪಡುತ್ತಿದ್ದರು. ಆದರೆ ಒಮ್ಮೆ ಭೀಕರ ಆರೋಗ್ಯ ತೊಂದರೆಯಿಂದ ಮಗ ಆಸ್ಪತ್ರೆಗೆ ದಾಖಲಾದಾಗ ಅದೇ ತಂದೆ ಬೆಂಗಳೂರಿನ ತುದಿ ಭಾಗದಿಂದ ಮೆಜೆಸ್ಟಿಕ್ ವರೆಗೆ ಬೈಕ್ ನಲ್ಲಿ ಹೋಗಿ ತನ್ನ ಮಗನಿಗಾಗಿ ಔಷಧಿಗಳನ್ನು ಖರೀದಿಸಿ ತಂದರು. ಇದು ಮಕ್ಕಳನ್ನು ಉಳಿಸಿಕೊಳ್ಳಲು ಮಾಡುವ ತಂದೆಯ ಕಸರತ್ತು..... ಅದಕ್ಕೆ ಅಪ್ಪ ಜೀವ ರಕ್ಷಕ, ದೇವರು ಕೊಟ್ಟ ಬದುಕಿನ ಬಹುದೊಡ್ಡ ಗಿಫ್ಟ್.

ಮಗ ಅತ್ಯಂತ ಕಡಿಮೆ ಅಂಕಗಳನ್ನು ಪರೀಕ್ಷೆಯಲ್ಲಿ ಪಡೆದು ಬಂದಾಗ ಅಮ್ಮ ಸಹಜವಾಗಿಯೇ ಕೋಪದಿಂದ ಕೂಗಾಡಿದರೆ ಅಪ್ಪ ಮಗನನ್ನು ಕೂರಿಸಿಕೊಂಡು ತನ್ನ ಸ್ನೇಹಿತ ಹಲವಾರು ಬಾರಿ ಪಿಯುಸಿ ಪರೀಕ್ಷೆಯಲ್ಲಿ ಫೇಲ್ ಆಗಿ ಪ್ರಯತ್ನ ಬಿಡದೆ ಓದಿದ್ದರ ಫಲವಾಗಿ ಪೆಥಾಲಜಿಸ್ಟ್ ಆಗಿರುವ ಉದಾಹರಣೆ ನೀಡಿ ಆತನಲ್ಲಿ ಹುಮ್ಮಸ್ಸು ತುಂಬಿದರು. ಫೇಲಾಗುವುದು ತಪ್ಪಲ್ಲ ಆದರೆ ಪ್ರಯತ್ನ ಮಾಡದೇ ಇರುವುದು ಬಹುದೊಡ್ಡ ತಪ್ಪು ಎಂದು ತಿಳಿಹೇಳಿದರು..... ಅದಕ್ಕೆ ಹೇಳುವುದು ಅಪ್ಪ ಆಪ್ತ ಸಲಹೆಗಾರ ಮತ್ತು ಆಪದ್ಬಾಂಧವ.



ಹೀಗೆ ಹೇಳುತ್ತಾ ಹೊರಟರೆ ಅಪ್ಪನ ಕುರಿತು ನೂರಾರು ವಿಷಯಗಳು ಪ್ರತಿ ಮನೆ ಮನೆಗಳಿಂದ ಹೊರ ಬರುತ್ತವೆ. ದೈಹಿಕವಾಗಿ 9 ತಿಂಗಳು ಹೊರುವ ತಾಯಿ ಭಾವನಾತ್ಮಕವಾಗಿ ಮಕ್ಕಳೊಂದಿಗೆ ತಂದೆಗಿಂತ ಹೆಚ್ಚು ಮಿಳಿತಗೊಂಡಿರುತ್ತಾಳೆ. ಅಪ್ಪ ಎಂದರೆ ಶಿಸ್ತು, ಅಪ್ಪ ಎಂದರೆ ಕೋಪ ಎಂಬ ಸಾತ್ವಿಕ ಭಯದಿಂದ ಗಂಡುಮಕ್ಕಳು ಅಪ್ಪನಿಂದ ಕೊಂಚ ದೂರವೇ ಇರುತ್ತಾರೆ. ಗಂಡು ಮಕ್ಕಳ ಪಾಲಿಗೆ ಅಪ್ಪ ಬಾಸ್, ಹಿಟ್ಲರ್, ಹೆಡ್ ಮಾಸ್ಟರ್ ಎಲ್ಲವೂ ಆಗಿರುತ್ತಾನೆ. ಮಕ್ಕಳು ಶಿಸ್ತಿನ ಜೀವನ ಶೈಲಿ ರೂಡಿಸಿಕೊಳ್ಳಲು ಅಪ್ಪನ ಈ ಅವತಾರಗಳು ಅತ್ಯಂತ ಅವಶ್ಯಕ... ಅಪ್ಪ ಬಾಸ್, ಹಿಟ್ಲರ್, ಹೆಡ್ ಮಾಸ್ಟರ್ ನಿಜ. ಆದರೆ ಇವೆಲ್ಲವುಗಳ ಹಿಂದೆ ಹೆಂಗರುಳಿನ ಅಪ್ಪ ಕಾಣುವುದಿಲ್ಲ. ಕಣ್ಣಲ್ಲಿ ನೀರಿನ ಪಸೆ ಇರುವುದಿಲ್ಲ, ಆದರೆ ಹೃದಯದಲ್ಲಿ ಕೋಲಾಹಲವಿರುತ್ತದೆ. ಎದೆ ಸೆಟೆಸಿ ನಡೆಯುವ ಅಪ್ಪ ತನ್ನ ಮಕ್ಕಳ ಭವಿಷ್ಯಕ್ಕಾಗಿ ಬೇರೊಬ್ಬರ ಮುಂದೆ ಬೆನ್ನು ಬಾಗಿಸಿ ನಿಂತಿರುತ್ತಾನೆ. ಮನೆಯಲ್ಲಿ ದರ್ಪ ತೋರಿಸುವ ಅಪ್ಪ ಮೇಲಧಿಕಾರಿಗಳ ಅಡಿಯಲ್ಲಿ ದಯನೀಯವಾಗಿ ಕಾರ್ಯನಿರ್ವಹಿಸುತ್ತಿರುತ್ತಾನೆ. ಅಮ್ಮ ಮನೆ ಸಂಬಾಳಿಸುತ್ತಾಳೆ ನಿಜ, ಆದರೆ ಅಪ್ಪ ಮನೆಯ ಸಂಭಾಳಿಸಲು ಬೇಕಾದ ಆರ್ಥಿಕ ಶಕ್ತಿಗಾಗಿ ಜಗತ್ತಿನೊಂದಿಗೆ ಹೋರಾಟ ನಡೆಸಿರುತ್ತಾನೆ.. ಅದಕ್ಕೆ ಅಪ್ಪ ಪ್ರಬಲ ಹೋರಾಟಗಾರ

**ವೀಣಾಂತರಂಗ**



–ವೀಣಾ ಎಚ್. ಪಾಟೀಲ್, ಮುಂಡರಗಿ


ಹೆಣ್ಣು ಮಕ್ಕಳು ಗಂಡು ಮಕ್ಕಳಂತೆ ಅಪ್ಪನಿಗೆ ಹೆದರುವುದಿಲ್ಲ .. ಅವರು ಅಪ್ಪನ ಮಕ್ಕಳು, ಅಪ್ಪನ ಅಪಾರ ಪ್ರೀತಿ ಮತ್ತು ಮಮತೆಯ ಕಡಲಲ್ಲಿ ಮಿಂದವರು. ಅದೇನೋ ಗೊತ್ತಿಲ್ಲ ಅಪ್ಪನಿಗೆ ಹೆಣ್ಣು ಮಕ್ಕಳೆಂದರೆ ತುಸು ಹೆಚ್ಚೇ ಸಾಫ್ಟ್ ಕಾರ್ನರ್.. ಹೆಣ್ಣು ಮಕ್ಕಳು ಅಪ್ಪನ ಪ್ರೀತಿಯ ಸಿಂಹಪಾಲನ್ನು ಪಡೆದರೆ, ಗಂಡು ಮಕ್ಕಳು ಮುಂದೆ ಅಪ್ಪನ ಜವಾಬ್ದಾರಿಯಲ್ಲಿ ಪಾಲು ಪಡೆಯುತ್ತಾರೆ. ಮಗಳೊಂದಿಗಿನ ಸಲಿಗೆ ಅಪ್ಪನನ್ನು ಒಳ್ಳೆಯ ಸ್ನೇಹಿತನನ್ನಾಗಿ ರೂಪಿಸಿದರೆ ಮಗಳು ತನ್ನ ಮೊದಲ ಸ್ನೇಹಿತನೊಂದಿಗೆ ತನ್ನೆಲ್ಲ ಭಾವನೆಗಳನ್ನು ಹಂಚಿಕೊಳ್ಳುತ್ತಾಳೆ. ಅಪ್ಪ ಹೆಣ್ಣು ಮಕ್ಕಳ ಪಾಲಿನ ಮೊದಲ ಹೀರೋ..


ಗಂಡು ಮಕ್ಕಳಿಗೆ ಉತ್ತಮ ನೌಕರಿ ದೊರೆತು ತನ್ನ ತಾಯಿ ತಂದೆ ಮತ್ತು ಮುಂದೆ ಮದುವೆಯಾದ ನಂತರ ತನ್ನನ್ನು ನಂಬಿ ಕೈ ಹಿಡಿದು ಬಂದ ಪತ್ನಿಗೆ ಉತ್ತಮ ಜೀವನ ಕೊಡುವ ಆಶಯ ಹೊಂದಿದರೆ ಹೆಣ್ಣು ಮಕ್ಕಳು ಕೂಡ ವಿದ್ಯಾವಂತರಾಗಿ ವಿವಾಹವಾಗಿ ಗಂಡನ ಮನೆಗೆ ಹೊರಡುತ್ತಾರೆ. ಆದರೆ ತಂದೆ ತಾಯಿಯ ಪ್ರೀತಿ ವಾತ್ಸಲ್ಯವನ್ನು ಹೊತ್ತು ಹೊರಡುವ ಮಕ್ಕಳು ಎಷ್ಟೇ ದೊಡ್ಡವರಾದರೂ ಮಕ್ಕಳಾಗಿಯೇ ಉಳಿಯುತ್ತಾರೆ. ತನ್ನ ಮಕ್ಕಳು ಅದಷ್ಟೇ ದೊಡ್ಡವರಾದರೂ ಅವರನ್ನು ಪ್ರೀತಿಸುವ ಅವರಿಗಾಗಿ ಮಿಡಿಯುವ, ದುಡಿಯುವ ತಾಯಿಯ ನಂತರದ ಏಕೈಕ ಜೀವಿ ತಂದೆ.. ಅದಕ್ಕೆ ಅಪ್ಪ ಕುಟುಂಬ ವತ್ಸಲ.

ಈ ಮುನ್ನ ತನ್ನ ತನ್ನ ತಂದೆಯನ್ನು ಮೈಸೂರು ಹುಲಿ ಎಂದು, ಬಾಸ್ ಎಂದು ಕರೆಯುತ್ತಿದ್ದ ಮಗ ತಾನು ತಂದೆಯಾದಾಗ ತನ್ನ ಮನೆ ಮತ್ತು ಕುಟುಂಬದ ನಿರ್ವಹಣೆಗಾಗಿ ಕೆಲಸ ನಿರ್ವಹಿಸುವಾಗ ಅಪ್ಪ ಅದೆಷ್ಟು ಗ್ರೇಟ್ ಎಂದು ಅರಿಯುತ್ತಾನೆ. ಅಪ್ಪಂದಿರು ಹಾಗೆ.. ಸಂಬಳ ಇನ್ನಷ್ಟು ಹೆಚ್ಚು ದೊರೆತರೆ, ಕುಟುಂಬಕ್ಕೆ ಆಸರೆಯಾಗುತ್ತದೆ ಎಂಬ ಭಾವ. ತನಗಾಗಿ ವರ್ಷಕ್ಕೆ ಒಂದೆರಡು ಜೊತೆ ಬಟ್ಟೆ ಹೊಲಿಸುವ, ಅಪ್ಪ ಎರಡು ವರ್ಷಕ್ಕೊಂದು ಜೊತೆ ಚಪ್ಪಲಿ ಸವೆಸುವ ಅತ್ಯಂತ ಮಿತವ್ಯಯದ ವ್ಯಕ್ತಿ ಅಪ್ಪ. ಸ್ನಾನ ಮಾಡಿ ಒಳಉಡುಪುಗಳನ್ನು ಧರಿಸಿ ಮೇಲೆ ತಾವೇ ಇಸ್ತ್ರಿ ಮಾಡಿಕೊಂಡ ಪ್ಯಾಂಟು ಶರ್ಟು ಅಥವಾ ಅಂಗಿಯ ಜೊತೆ ಪಂಚೆ ಇಲ್ಲವೇ ಧೋತರವನ್ನು ಧರಿಸಿ ಎಣ್ಣೆ ಹಾಕಿ ಓರಣವಾಗಿ ಬಾಚಿ ದೇವರಿಗೊಂದು ಕೈಮುಗಿದರೆ ಅಪ್ಪನ ಅಲಂಕಾರ ಮುಗಿದಂತೆಯೇ.. ಅದಕ್ಕೆ ಅಪ್ಪ ಸರಳಾತಿಸರಳ ಜೀವಿ.. ಕಾಯಕ ಜೀವಿಯೂ ಹೌದು..

ಸಂಬಳ ಬಂದ ದಿನ ತಿಂಗಳ ಮನೆ ಖರ್ಚಿಗೆ, ಬಾಡಿಗೆಗೆ, ಔಷಧಿಗೆ ಎಂದು ಹಣವನ್ನು ಎತ್ತಿಡುವ ತಂದೆ ಬೋನಸ್ ನಂತಹ ಹೆಚ್ಚುವರಿ ಹಣ ದೊರೆತಾಗ ಹೆಂಡತಿ ಮಕ್ಕಳಿಗೆ ಬಟ್ಟೆ ಬರೆ ಖರೀದಿಸಲು ಸಂತೆಗೆ ಕರೆದೊಯ್ದು ಅವರ ಸಂತೋಷವನ್ನು ಕಣ್ತುಂಬಿಕೊಳ್ಳುತ್ತಾನೆ. ಕೈಯಲ್ಲಿ ಹಣವಿಲ್ಲದಿದ್ದರೂ ಮಕ್ಕಳನ್ನು ತನಗೆ ಸರಿ ಎನಿಸಿದ ಒಳ್ಳೆಯ ಶಾಲೆ ಕಾಲೇಜುಗಳಿಗೆ ದಾಖಲು ಮಾಡುವ ಅಪ್ಪ ಮಕ್ಕಳ ಎಲ್ಲಾ ಅವಶ್ಯಕತೆಗಳನ್ನು ಪೂರೈಸುವುದರ ಜೊತೆ ಜೊತೆಗೆ ಅವರ ಒಳ್ಳೆಯ ಬ್ರಾಂಡೆಡ್ ಬಟ್ಟೆಗಳು ಶೂಗಳು ಮೊಬೈಲ್, ಪ್ರವಾಸ, ಸ್ಟಡಿ ಟೂರ್ನಂತಹ ಮತ್ತಿತರ ಅವಶ್ಯಕತೆಗಳನ್ನು ಕೂಡ ಶಕ್ತ್ಯಾನುಗತಾಯ ಪೂರೈಸುತ್ತಾನೆ.... ಅದಕ್ಕೆ ನಾವು ಕೇಳಿದ್ದನ್ನು ಪೂರೈಸುವ ಕಲ್ಪವೃಕ್ಷ ಅಪ್ಪ

ಹೆಣ್ಣು ಮಕ್ಕಳನ್ನು





ಮದುವೆ ಮಾಡಿ ಕಳುಹಿಸುವ ಅಪ್ಪ ರಜಾದಿನಗಳನ್ನು ಕಳೆಯಲು ಅವರು ಬರುವ ದಿನ ಚಿಕ್ಕ ಮಕ್ಕಳಂತೆ ಹೆಚ್ಚು ಸಂಭ್ರಮದಿಂದ ಅವರನ್ನು ಎದುರುಗೊಳ್ಳುತ್ತಾನೆ. ಮಗಳು ಇದ್ದಷ್ಟು ದಿನವೂ ಆಕೆಯ ಎಲ್ಲ ಬೇಕು ಬೇಡಗಳನ್ನು ಒದಗಿಸುತ್ತ ಆಕೆಯ ಹಾಸಿಗೆ ಹೊದಿಕೆಗಳನ್ನು ಕೂಡ ತಾನೆ ಹೊಂದಿಸಿಕೊಡುವ ಸಂಜೆಯಾದರೆ ಆಕೆಯನ್ನು ತಿನ್ನಲು ಹೊರಗೆ ಕರೆದೊಯ್ಯುವ, ಮರಳಿ ಹೋಗುವಾಗ ಬಟ್ಟೆ ಬರೆ ಕೊಡಿಸಿ ಆಕೆಯ ಕಣ್ಣರಳುವುದನ್ನು ನೋಡಿ ಸಂಭ್ರಮಿಸುವ ಅಪ್ಪ ಮಗಳ ಪಾಲಿಗೆ ಕೇಳಿದ್ದನ್ನು ಕೊಡುವ ಕಾಮಧೇನು.

ಮೊಮ್ಮಕ್ಕಳಂತೂ ಅಪ್ಪನ ನೆಚ್ಚಿನ ಗೆಳೆಯರು. ಹರೆಯದಲ್ಲಿ, ಕುಟುಂಬ ರಕ್ಷಣೆಯ ಹೊಣೆಗಾರಿಕೆಯಲ್ಲಿ ತನ್ನ ಮಕ್ಕಳೊಂದಿಗೆ ಬೆರೆತು ಆಡಲಾಗದ ಎಲ್ಲಾ ಆಟ ಪಾಠಗಳನ್ನು ತನ್ನ ಮೊಮ್ಮಕ್ಕಳ ಜೊತೆ ಆಡುವ ಅಪ್ಪ ಪುಟ್ಟ ಮಗುವಿನಂತೆ ಭಾಸವಾಗುತ್ತಾನೆ. ತನ್ನ ಮಕ್ಕಳಿಗೆ ಜಿಪುಣ ಎಂಬಂತೆ ತೋರುವ ಅಪ್ಪ ಮೊಮ್ಮಕ್ಕಳ ಪಾಲಿಗೆ ಕೇಳಿದ್ದನ್ನು ಕೊಡಿಸುವ ಕಾಮಧೇನು. ಅಮ್ಮ ಮತ್ತು ಅಜ್ಜಿಯರ ಕಣ್ಗಾವಲನು ತಪ್ಪಿಸಿ ಮೊಮ್ಮಕ್ಕಳಿಗಾಗಿ ಚಾಕಲೇಟುಗಳನ್ನು ಸಿಹಿ ತಿಂಡಿಗಳನ್ನು ಚಿಪ್ಸ್ ಗಳನ್ನು ತಂದು ಕೊಡುವ ಇಲ್ಲವೇ ಹೊರಗೆ ಕರೆದು ತಿನ್ನಿಸಿಕೊಂಡು ಬರುವ ಅಜ್ಜ ಮೊಮ್ಮಕ್ಕಳಿಗಾಗಿ ಸುಳ್ಳು ಹೇಳುವುದನ್ನು ಕಲಿಯುತ್ತಾನೆ, ತಂದೆ ತಾಯಿಯರ ಶಿಕ್ಷೆಯಿಂದ ರಕ್ಷಿಸುತ್ತಾನೆ.. ಅಪ್ಪ ಅಜ್ಜನಾಗಿ ಪರಿವರ್ತನೆ ಹೊಂದಿದಾಗ.. ಹಳೇ ಬೇರು ಹೊಸ ಚಿಗುರು ಕೂಡಿದರೆ ಮರ ಸೊಗಸು ಎಂಬುದು ಇದಕ್ಕೇ ಇರಬೇಕು.

ಬದಲಾದ ಕಾಲಘಟ್ಟದಲ್ಲಿ ಅಪ್ಪ ಮಕ್ಕಳೊಂದಿಗೆ ಇನ್ನೂ ಹೆಚ್ಚು ಮಿಳಿತಗೊಳ್ಳುತ್ತಾನೆ. ಅಪ್ಪ ಮಕ್ಕಳನ್ನು ತಬ್ಬಿ ಮುದ್ದಾಡುತ್ತಾನೆ ಸ್ನೇಹ ಭಾವದಿಂದ ವರ್ತಿಸುತ್ತಾನೆ ಅವರಿಗೆ ಬೇಕಾದ ಸಾಮಾನುಗಳನ್ನು ಅವರನ್ನೇ ಕರೆದುಕೊಂಡು ಹೋಗಿ ಕೊಡಿಸುತ್ತಾನೆ. ವಾರಾಂತ್ಯಗಳಲ್ಲಿ ಹೊರಗೆ ಕರೆದೊಯ್ಯುತ್ತಾನೆ. ಹೆಂಡತಿ ಮಕ್ಕಳ ಸುಖದಲ್ಲಿ ಕುಟುಂಬದ ಏಳಿಗೆಯಲ್ಲಿ ತನ್ನನ್ನು ತಾನು ತೊಡಗಿಸಿಕೊಳ್ಳುತ್ತಾನೆ. ಪಾತ್ರಗಳು ಬದಲಾಗಿಲ್ಲ ಆದರೆ ಪಾತ್ರಧಾರಿಗಳು ಬದಲಾಗಿದ್ದಾರೆ. ಅವರ ವೇಷಭೂಷಣದಲ್ಲಿ ಕೊಂಚ ವ್ಯತ್ಯಾಸವಾಗಿದೆ. ಒಂದು ಪಾತ್ರೆಯಿಂದ ಇನ್ನೊಂದು ಪಾತ್ರೆಗೆ ಸುರಿದಂತಹ ಎರಕವೇ.. ಅಪ್ಪ.

**ಅಪ್ಪನಿಗೆ ಯಾರು ಸಾಟಿ ಇಲ್ಲ**
**ಅಪ್ಪನೇ ಮಕ್ಕಳ ಬಾಳಿಗೆ ಎಲ್ಲ**
**ಎಲ್ಲರಿಗೂ ಅಪ್ಪ ಬೇಕೇ ಬೇಕಲ್ಲ**
**ನೂರ್ಕಾಲ ಬಾಳಲಿ ಹಾರೈಸಿರೆಲ್ಲ..**